ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 267 RNI Number : KNKAN/25/A2770 10-10-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:267 ರಾಯಚೂರು 10-10-2026 ಶನಿವಾರ ಪುಟ 04 ಬೆಲೆ ರೂ.2/- RCR/L/RNP/117/2026-28

ಉಪಚುನಾವಣೆ ಫಲಿತಾಂಶ: ಪ.ಬಂಗಾಳ, ಅಸ್ಸೋಂನಲ್ಲಿ ಬಿಜೆಪಿಗೆ ಗೆಲುವು; ತಮಿಳುನಾಡಿನಲ್ಲಿ ಟಿವಿಕೆ ಜಯಭೇರಿ

ಹೈದರಾಬಾದ್:

ಪಶ್ಚಿಮ ಬಂಗಾಳ ವಿಧಾನಸಭಾ ಉಪಚುನಾವಣೆಯ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಕಂಡಿದೆ. ಸಾರ್ವತ್ರಿಕ ಚುನಾವಣೆಯಾದ ಬಳಿಕ ಎದುರಾಗಿದ್ದ ಈ ಉಪ ಕದನದ ಫಲಿತಾಂಶವು ಸಾಕಷ್ಟು ಮಹತ್ವ ಪಡೆದಿತ್ತು.

ರಾಜಕೀಯವಾಗಿ ಪ್ರಮುಖವಾಗಿ ಗಮನ ಸೆಳೆದಿದ್ದ ನಂದಿಗ್ರಾಮ ಮತ್ತು ರೆಜಿನಗರ ವಿಧಾನಸಭಾ ಉಪಚುನಾವಣೆಯಲ್ಲಿ ಬಿಜೆಪಿ ದಾಖಲೆಯ ಗೆಲುವು ದಾಖಲಿಸಿದೆ.

ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರ ಹತ್ಯೆಗೀಡಾದ ಸಹಾಯಕನ ತಾಯಿ ಹಾಗೂ ನಂದಿಗ್ರಾಮದ ಬಿಜೆಪಿ ಅಭ್ಯರ್ಥಿ ಹಸಿರಾಣಿ ರಾಥ್ ಅವರು 1,22,800 ಮತಗಳ ಅಂತರದಿಂದ ದಾಖಲೆಯ ಜಯ ಗಳಿಸಿದ್ದಾರೆ.

ಈ ಕ್ಷೇತ್ರವು ಸುವೇಂದು ಅವರ ತವರು ಕ್ಷೇತ್ರವಾಗಿದೆ. ಈ ವಿಧಾನಸಭಾ ಸ್ಥಾನಕ್ಕೆ ಸುವೇಂದು ರಾಜೀನಾಮೆ ನೀಡಿದ ಬಳಿಕ ಉಪಚುನಾವಣೆ ಎದುರಾಗಿತ್ತು. ಬಿಜೆಪಿ ಅಭ್ಯರ್ಥಿಯಾಗಿ ಹಸಿರಾಣಿ ರಾಥ್ ಕಣಕ್ಕಳಿದಿದ್ದರು. 2016ರ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಇದೇ ಕ್ಷೇತ್ರದಲ್ಲಿ ಸುವೇಂದು ಅಧಿಕಾರಿ ಅವರು ದಾಖಲೆಯ 81,230 ಮತಗಳಿಂದ ಜಯಿಸಿದ್ದರು. ಆದರೆ ಈಗ ಹಸಿರಾಣಿ ಅವರು 1.22 ಲಕ್ಷ ಮತಗಳ ಅಂತರದಿಂದ ಜಯಿಸಿದ್ದಾರೆ.

ರೆಜಿನಗರ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಶಂಕರವ್ ಸರ್ಕಾರ್ 70,000ಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಕಂಡಿದ್ದಾರೆ.

ತಮಿಳುನಾಡಿನಲ್ಲಿ ಟಿವಿಕೆ ಮುನ್ನಡೆ: ತಮಿಳುನಾಡಿನ ಮಧುರಾಂತಕಂ ಕ್ಷೇತ್ರದಲ್ಲಿ ಆಡಳಿತರೂಢ ಟಿವಿಕೆ ಪಕ್ಷದ ಅಭ್ಯರ್ಥಿ ಮರಗಥಂ ಕುಮಾರವೇಲ್ ಗೆಲುವು ಕಂಡಿದ್ದಾರೆ. ಡಿಎಂಕೆ ಅಭ್ಯರ್ಥಿ ಪರಂತಮನ್ ಅವರನ್ನು 19,312 ಮತಗಳಿಂದ ಸೋಲಿಸಿದ್ದಾರೆ.

ಧಾರಾಪುರಂ ಮೀಸಲು ಕ್ಷೇತ್ರದಲ್ಲೂ ಟಿವಿಕೆ ಮುನ್ನಡೆ ಕಾಯ್ದುಕೊಂಡಿದ್ದು, ಕಾರ್ಯಕರ್ತರಲ್ಲಿ ಸಂತಸ, ಸಂಭ್ರಮ ಮನೆ ಮಾಡಿದೆ.

ಅಸ್ಸೋಂನಲ್ಲಿ ಬಿಜೆಪಿ ಮುನ್ನಡೆ: ಅಸ್ಸೋಂನ ನಾಗಾಂವ್ ಲೋಕಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆಯು ಅಂತಿಮ ಹಂತವನ್ನು ತಲುಪಿದ್ದು, ಬಿಜೆಪಿ ಅಭ್ಯರ್ಥಿ ದೇವಶಿಶ್ ಶರ್ಮಾ ಅವರು ಎಐಯುಡಿಎಫ್ ಮುಖ್ಯಸ್ಥ ಬದ್ರುದ್ದೀನ್ ಅಜ್ಮಲ್ ಅವರಿಗಿಂತ 96,115 ಮತಗಳ ಮುನ್ನಡೆ ಕಾಯ್ದುಕೊಂಡಿದ್ದಾರೆ.



ಪುದುಚೇರಿಯಲ್ಲಿ ಆಡಳಿತ ಪಕ್ಷಕ್ಕೆ ಗೆಲುವು: ಸಿಎಂ ಎನ್ ರಂಗಸಾಮಿ ರಾಜೀನಾಮೆಯಿಂದ ತೆರವಾಗಿರುವ ತಟ್ಟಂಚಾವಡಿ ವಿಧಾನಸಭಾ ಕ್ಷೇತ್ರದಲ್ಲಿ ಆಡಳಿತಾರೂಢ ಎಐಎನ್‌ಆರ್‌ಸಿ ಪಕ್ಷ ಗೆಲುವು ಸಾಧಿಸಿದೆ. ಮುಖ್ಯಮಂತ್ರಿ ಎನ್. ರಂಗಸ್ವಾಮಿ ಅವರ ಭದ್ರಕೋಟೆ ಎಂದೇ ಪರಿಗಣಿಸಲಾಗಿದ್ದ ಕ್ಷೇತ್ರವನ್ನು ಪಕ್ಷವು ತನ್ನ ಹಿಡಿತದಲ್ಲಿಯೇ ಉಳಿಸಿಕೊಂಡಿದೆ.

ಎನ್‌ಡಿಎ ಮೈತ್ರಿಕೂಟದ ಸರ್ಕಾರದ ಎಐಎನ್‌ಆರ್‌ಸಿ ಪಕ್ಷದ ಅಭ್ಯರ್ಥಿ ಅಶೋಕ್ ಆನಂದ್ ಅವರು ಕಾಂಗ್ರೆಸ್‌ನ ಇ. ವಿನಾಯಕಂ ಅವರನ್ನು 8,400ಕ್ಕೂ ಹೆಚ್ಚು ಮತಗಳ ಅಂತರದಿಂದ ಸೋಲಿಸಿದರು.

ಎಸ್‌ಐಆರ್ ರದ್ದುಪಡಿಸಲು ಆಗ್ರಹಿಸಿ ಕಾಂಗ್ರೆಸ್ ಪ್ರತಿಭಟನೆ

ರಾಯಚೂರು:

ಎಸ್‌ಐಆರ್ ಪ್ರಕ್ರಿಯೆಯನ್ನು ಹಿಂಪಡೆಯಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಇಂಡಿಯಾ ಮೈತ್ರಿಕೂಟದ ನೇತೃತ್ವದಲ್ಲಿ ಶುಕ್ರವಾರ ನಗರದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಯಿತು.



ರಾಯಚೂರಿನ ನೇತಾಜಿನಗರದ ಶೆಟ್ಟಿಭಾವಿ ವೃತ್ತದಿಂದ ಆರಂಭವಾದ ಮೆರವಣಿಗೆಯು ತೀನ್ ಕಂದೀಲ್ ವೃತ್ತ, ಸೂಪರ್ ಮಾರ್ಕೆಟ್, ಏಕ್ ಮಿನಾರ್ ಮಸ್ಜಿದ್, ಕೇಂದ್ರ ಬಸ್ ನಿಲ್ದಾಣದ ಮಾರ್ಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ವರೆಗೆ ಮೆರವಣಿಗೆ ನಡೆಯಿತು. ಪ್ರತಿಭಟನೆಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಮುಖವಾಡ ಧರಿಸಿ ಪ್ರಧಾನಿ ಮೋದಿ ಮತ್ತು ಅಮಿತ್ ಶಾ ನಿಯಂತ್ರನ ಮಾಡುವಂತೆ ಅಣಕು ಪ್ರದರ್ಶನ ಮಾಡಿದರು.

ಇಂಡಿಯಾ ಮೈತ್ರಿಕೂಟ, ಮತ ಕಾವಲು ಸಮಿತಿ ವತಿಯಿಂದ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ವಿವಿಧ ಸಂಘಟನೆಗಳ ಪ್ರತಿನಿಧಿಗಳು ಹಾಗೂ ಮೈತ್ರಿಕೂಟದ ಬೆಂಬಲಿಗರು ಪಾಲ್ಗೊಂಡು ಮತದಾರರ ಹಕ್ಕುಗಳ ರಕ್ಷಣೆಗೆ ಆಗ್ರಹಿಸಿದರು.

ಮತದಾರರ ಪಟ್ಟಿಯಲ್ಲಿನ ಹೆಸರುಗಳನ್ನು ಕೈಬಿಡುವ ಅಥವಾ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗುವ ಪರಿಸ್ಥಿತಿ ನಿರ್ಮಾಣವಾಗಬಾರದು. ಚುನಾವಣಾ ಪ್ರಕ್ರಿಯೆ ಪಾರದರ್ಶಕವಾಗಿರಬೇಕು ಮತ್ತು ಚುನಾವಣಾ ಆಯೋಗವು ಯಾವುದೇ ರಾಜಕೀಯ ಒತ್ತಡಕ್ಕೆ ಒಳಗಾಗದೆ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಸಚಿವ ಹಾಗೂ ವಿಧಾನಪರಿಷತ್ ಎನ್ ಎಸ್ ಬೋಸರಾಜು ಮಾತನಾಡಿ, ಪಶ್ಚಿಮ ಬಂಗಾಳ, ಬಿಹಾರ ಸೇರಿ ಹಲವೆಡೆ ಬಿಜೆಪಿ ವೋಟ್ ಚೋರಿ ಮಾಡಿ ಅಧಿಕಾರಕ್ಕೆ ಬಂದಿದೆ. ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಬಿಜೆಪಿಯ ಕೈಗೊಂಬೆಯಾಗಿ ಕೆಲಸ ಮಾಡುತ್ತಿದೆ. ಜ್ಞಾನೇಶ್ ಕುಮಾರ್ ಅವರನ್ನು ಕೂಡಲೇ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವಿಧಾನ ಪರಿಷತ್

3ನೇ ಪುಟಕ್ಕೆ

ನೂತನ ಗರ್ಭನಿರೋಧಕ ಇಂಪ್ಲಾಟ್ ತರಬೇತಿ ಕಾರ್ಯಾಗಾರ

ಮಕ್ಕಳ ನಡುವಿನ ಅಂತರಕ್ಕೆ ಪರಿಣಾಮಕಾರಿ ಯೋಜನೆ: ಡಾ.ಚಂದ್ರಿಕಾ

ರಾಯಚೂರು ಅಕ್ಟೋಬರ್ 09 (ಕರ್ನಾಟಕ ವಾರ್ತೆ): ಕುಟುಂಬ ಕಲ್ಯಾಣ ಕಾರ್ಯಕ್ರಮದಡಿ ಮಕ್ಕಳ ನಡುವಿನ ಅಂತರ ಕಾಯ್ದುಕೊಳ್ಳಲು ಸರ್ಕಾರವು ಹೊಸ ಹೊಸ ವಿಧಾನಗಳನ್ನು ಜಾರಿಗೆ ತರುತ್ತಿದೆ. ಈಗಾಗಲೇ ಚುಚ್ಚುಮದ್ದು, ಪಿಪಿಐಯುಸಿಡಿ, ಛಾಯಾ ಮಾತ್ರೆ, ಅಂತರ ಚುಚ್ಚುಮದ್ದು ಹಾಗೂ ಪುರುಷರಿಗೆ ನಿರೋಧ್ ಸೇವೆಗಳು ಲಭ್ಯವಿದ್ದು, ಇದೀಗ ಹೊಸದಾಗಿ ಚರ್ಮದಡಿಯ ಗರ್ಭನಿರೋಧಕ ಇಂಪ್ಲಾಟ್ ರಾಡ್ ಅಳವಡಿಸುವ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯದ ಕುಟುಂಬ ಕಲ್ಯಾಣ ಕಾರ್ಯಕ್ರಮದ ಉಪ ನಿರ್ದೇಶಕರಾದ ಡಾ.ಚಂದ್ರಿಕಾ ಬಿ.ಆರ್ ಅವರು ಹೇಳಿದರು.



ಅಕ್ಟೋಬರ್ 08ರ ಶುಕ್ರವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ವಿಭಾಗ ಹಾಗೂ ವಿಶ್ವ ಆರೋಗ್ಯ ಸಂಸ್ಥೆ ಇವರುಗಳ ಸಂಯುಕ್ತಾಶ್ರಯದಲ್ಲಿ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ತಜ್ಞ ವೈದ್ಯರು, ತಾಲೂಕು ಆರೋಗ್ಯಾಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ಗರ್ಭನಿರೋಧಕ ಅಳವಡಿಕೆ ಕುರಿತ ಪುನರ್‌ಮನನ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬೆಂಕಿಕಡ್ಡಿ ಗಾತ್ರದ ಈ ಸಣ್ಣ, ಹೊಂದಿಕೊಳ್ಳುವ ರಾಡ್‌ನ್ನು ತರಬೇತಿ ಪಡೆದ ತಜ್ಞ ವೈದ್ಯರು ಮಹಿಳೆಯ ಮೇಲ್ತೋಳಿನ ಚರ್ಮದ ಕೆಳಗೆ ಅಳವಡಿಸುತ್ತಾರೆ. ಒಮ್ಮೆ ಅಳವಡಿಸಿದರೆ ಇದು ಗರ್ಭಧಾರಣೆಯಿಂದ ಸುಮಾರು 3 ವರ್ಷಗಳವರೆಗೆ ರಕ್ಷಣೆ ನೀಡುತ್ತದೆ. ಇದು ಅಂಡಾಶಯದಿದ ಅಂಡಾಣು ಬಿಡುಗಡೆಯಾಗುವುದನ್ನು ತಡೆಯುತ್ತದೆ, ಗರ್ಭಕಂಠದ ಲೋಳೆಯನ್ನು ದಪ್ಪವಾಗಿಸಿ ವೀರ್ಯಾಣುಗಳು ಅಂಡಾಣುವನ್ನು ಸೇರದಂತೆ ತಡೆಯುತ್ತದೆ ಹಾಗೂ ಗರ್ಭಕೋಶದ ಒಳಪದರವನ್ನು ತೆಳುವಾಗಿಸಿ

3ನೇ ಪುಟಕ್ಕೆ

ಗೃಹ ರಕ್ಷಕ ಸಿಬ್ಬಂದಿಗೆ ಉಚಿತ ಬಸ್ ಪ್ರಯಾಣಕ್ಕೆ ಅವಕಾಶ ಕಲ್ಪಿಸಿ ಸಂಚಾರಿ ನಿಯಂತ್ರಣಕರುಗಳಿಗೆ ಮನವಿ



ಸಿರವಾರ ,ಅ. 07

ಕರ್ನಾಟಕ ಸರ್ಕಾರದ ಆದೇಶ ದಂತೆ, ಕರ್ತವ್ಯ ಸಮವಸ್ತ್ರದಲ್ಲಿರುವ ಗೃಹ ರಕ್ಷಕ ದಳದ ಸಿಬ್ಬಂದಿಗೆ ಸಾರಿಗೆ ಬಸ್‌ಗಳಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಬೇಕು ಎಂದು ಸಿರವಾರ ಗೃಹ ರಕ್ಷಕ ದಳದ ಸಿಬ್ಬಂದಿ ಸಂಚಾರಿ ನಿಯಂತ್ರಣಕರುಗಳಿಗೆ ಮನವಿ ಸಲ್ಲಿಸಿದರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ 385/1991 ರ ಪ್ರಕಾರ ಸಮವಸ್ತ್ರದಲ್ಲಿರುವ ಗೃಹ ರಕ್ಷಕ ಸಿಬ್ಬಂದಿಗೆ ಉಚಿತ ಪ್ರಯಾಣಕ್ಕೆ ಅವಕಾಶವಿದೆ ಎಂದು ಕಲಬುರಗಿ ವಿಭಾಗದ ಮುಖ್ಯ ಸಂಚಾರ ವ್ಯವಸ್ಥಾಪಕರು ಆದೇಶಿಸಿದ್ದಾರೆ. ಆದರೂ ಕೆಲವು ಕಡೆ ಪಾಲನೆಯಾಗುತ್ತಿಲ್ಲ.

ಈ ಹಿನ್ನೆಲೆಯಲ್ಲಿ ಸಿರವಾರ ಘಟಕದ ಗೃಹ ರಕ್ಷಕ ಸಿಬ್ಬಂದಿಗಳಾದ ಎಸ್. ವಿಶ್ವನಾಥ ನಾಯಕ, ನಿಂಗಪ್ಪ, ಮಲ್ಲಯ್ಯ ನಾಯಕ, ಪುರುಷೋತ್ತಮ್ ಮತ್ತು ಚೇತನ್ ಚೌಧರಿ ಅವರು ಸಂಚಾರಿ ನಿಯಂತ್ರ ಣಕರುಗಳಿಗೆ ಮನವಿ ಪತ್ರ ಸಲ್ಲಿಸಿ, ಎಲ್ಲಾ ಚಾಲಕ-ನಿರ್ವಾಹಕರಿಗೆ ಸೂಕ್ತ ಸೂಚನೆ ನೀಡುವಂತೆ ಒತ್ತಾಯಿ ಸಿದರು.

ಸಕಾಲಕ್ಕೆ ಮಾಹಿತಿ ನೀಡದ ಅಧಿಕಾರಿಗಳಿಗೆ ಮಾಹಿತಿ ಆಯೋಗದಿಂದ ದಂಡ ವಿಧಿಸಿ ಆದೇಶ

ರಾಯಚೂರು ಅಕ್ಟೋಬರ್ 09

ಸಕಾಲಕ್ಕೆ ಮಾಹಿತಿ ನೀಡಲು ಹಾಗೂ ವಿಚಾರಣೆಗೆ ಹಾಜರಾಗದೆ ನಿರ್ಲಕ್ಷ್ಯ ವಹಿಸಿದ ವಿವಿಧ ಸಾರ್ವಜನಿಕ ಪ್ರಾಧಿಕಾರದ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠ ದಂಡ ವಿಧಿಸಿ ಆದೇಶ ಮಾಡಿದೆ.



ಮೇಲ್ಮನವಿದಾರರು ಮಾಹಿತಿ ಕೋರಿ ಅರ್ಜಿ ಸಲ್ಲಿಸಿದ್ದು, ಅವರಿಗೆ ಪ್ರತಿವಾದಿಗಳು ಸಕಾಲಕ್ಕೆ ಮಾಹಿತಿ ನೀಡದ ಕಾರಣ ಮೇಲ್ಮನವಿದಾರ ಕರ್ನಾಟಕ ಮಾಹಿತಿ ಆಯೋಗ ಕಲಬುರಗಿ ಪೀಠದ ಮುಂದೆ ಸಲ್ಲಿಸಿದ ದ್ವಿತೀಯ ಮೇಲ್ಮನವಿಯ ವಿಚಾರಣೆ ನಡೆಸಿದ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಬಿ.ವೆಂಕಟ ಸಿಂಗ್ ಐವರು ಅಧಿಕಾರಿಗಳಿಗೆ ತಲಾ 10 ಸಾವಿರದಂತೆ ಒಟ್ಟು 50 ಸಾವಿರ ದಂಡ ವಿಧಿಸಿ ಆದೇಶ ಮಾಡಿದ್ದಾರೆ.

10 ಸಾವಿರ ರಾಯಚೂರು ತಾಲೂಕಿನ ಮೇಲ್ಮನವಿದಾರರಿಗೆ ಮಾಹಿತಿ ನೀಡಿ, ಅವರಿಗೆ ನೀಡಿದ ಮಾಹಿತಿ ಮತ್ತು ಸ್ವೀಕೃತಿ ಪತ್ರಿಯನ್ನು ಆಯೋಗಕ್ಕೆ ಸಲ್ಲಿಸುವಂತೆ ಆಯೋಗ ಮಾಡಿದ ಆದೇಶ ಪಾಲನೆ ಮಾಡದೆ ನಿರ್ಲಕ್ಷ್ಯ ಮಾಡಿದ ಕಾರಣ ಈ ಹಿಂದೆ ಬಸವಕಲ್ಯಾಣ ನಗರಸಭೆ ಪ್ರಥಮ ದರ್ಜೆ

3ನೇ ಪುಟಕ್ಕೆ

ರೈತನ ಮೇಲೆ ಅರಣ್ಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಂದ ಮಾರಣಾಂತಿಕ ಹಲ್ಲೆ

ಲಿಂಗಸಗೂರು : ಅ -10 ಸಂಜೆ ★ಜ್ವಾಲೆ

ರಾಯಚೂರು ಜಿಲ್ಲೆಯ ಮಸ್ಕಿ ತಾಲೂಕಿನ ಯರದೊಡ್ಡಿ ಗ್ರಾಮದಲ್ಲಿ ರೈತನೊಬ್ಬನ ಮೇಲೆ ಅರಣ್ಯ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು ಸೇರಿ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.



ಯರದೊಡ್ಡಿ ಗ್ರಾಮದ ಸರ್ವೆ ನಂ. 29 ರ ರಸ್ತೆ ಬದಿಯ ಜಮೀನಿನಲ್ಲಿ ರಸ್ತೆ ಬದಿಯ ಸಸಿಗಳನ್ನು ಹಚ್ಚಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಈ ಹಲ್ಲೆ ನಡೆದಿದೆ ಎಂದು ತಿಳಿದುಬಂದಿದೆ. ಹಲ್ಲೆಗೊಳಗಾದ ರೈತನನ್ನು ರಮೇಶ ತಂದೆ ಹನುಮಂತ ಎಂದು ಗುರುತಿಸಲಾಗಿದೆ. ಬುಧವಾರ ಮಧ್ಯಾಹ್ನ 2 ಗಂಟೆಯಿಂದ ರಾತ್ರಿಯವರೆಗೆ ಅರಣ್ಯ ಅಧಿಕಾರಿಗಳು ರೈತನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದ್ದು .ಘಟನೆಯಿಂದ ರೈತ ಗಂಭೀರವಾಗಿ ಗಾಯಗೊಂಡಿದ್ದು, ಲಿಂಗಸಗೂರು ಸರಕಾರಿ ಆಸ್ಪತ್ರೆ ಯಲ್ಲಿ ದಾಖಲಾಗಿದ್ದಾನೆ. ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ಎಂ.ಎಲ್.ಸಿ. ದಾಖಲಾಗಿದೆ.

ರೈತನ ಜಮೀನಿನ ಪಕ್ಕದ ರಸ್ತೆ ಬದಿಯಲ್ಲಿ ಸಸಿ ನೆಡುವ ವಿಚಾರದಲ್ಲಿ ಈ ಗಲಾಟೆ ನಡೆದಿದೆ ಎನ್ನಲಾಗುತ್ತಿದ್ದು, ಅಧಿಕಾರಿ ಹಾಗೂ ಸಿಬ್ಬಂದಿಗಳು ಏಕಾಏಕಿ ಹಲ್ಲೆ ನಡೆಸಿ ರಕ್ತ ಹೆಪ್ಪುಗಟ್ಟುವಂತೆ ಮನಬಂದಂತೆ ತಳಿಸಿ ರೈತನಿಂದ ಸಹಿ ಮಾಡಿಸಿಕೊಂಡು . ನಂತರ ಹಣಕ್ಕೆ ಬೇಡಿಕೆ ಇಟ್ಟಿದ್ದಾರೆಂದು ಹಲ್ಲೆಗೊಳಗದ ವ್ಯಕ್ತಿಯ ಕುಟುಂಬಸ್ಥರು ತಿಳಿಸಿದ್ದಾರೆ . ಇದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ.

ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ಹಲ್ಲೆ ಮಾಡಿದ ಅರಣ್ಯ ಅಧಿಕಾರಿ ಹಾಗೂ ಸಿಬ್ಬಂದಿಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ರೈತ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಆಗ್ರಹಿಸಿದ್ದಾರೆ. ಕ್ರಮ ಕೈಗೊಳ್ಳದೆ ಇದ್ದಲ್ಲಿ ಇಲಾಖೆಯ ಮುಂದೆ ಪ್ರತಿಭಟನೆ ನಡೆಸಲಾಗುವುದೆಂದು ತಿಳಿಸಿದ್ದಾರೆ

ಶಾಸಕರ ಭವನಕ್ಕೆ ಉಪಸಭಾಪತಿ ಡಾ. ಉಮಾಶ್ರೀ ದಿಢೀರ್ ಭೇಟಿ

"ಶಾಸಕರುಗಳಿಗೆ ಯಾವುದೇ ತೊಂದರೆಯಾದಂತೆ ಗಮನಹರಿಸಿ"

ಬೆಂಗಳೂರು: ಶಾಸಕರ ಭವನದಲ್ಲಿ ವಾಸ್ತವ್ಯವಿರುವ ಶಾಸಕರುಗಳ ಶಾಂತಿ ಮತ್ತು ಪ್ರಶಾಂತ ವಾತಾವರಣಕ್ಕೆ ಧಕ್ಕೆಯಾಗಬಾರದು; ವೈದ್ಯಕೀಯ ಸೇವೆ ಇನ್ನಿತರ ಸೌಲಭ್ಯಗಳ ಬಗ್ಗೆ ಗಮನಹರಿಸುವಂತೆ ಕರ್ನಾಟಕ ವಿಧಾನ ಪರಿಷತ್ತಿನ ಉಪಸಭಾಪತಿಗಳು ಹಾಗೂ ಪರಿಷತ್ತಿನ ವಸತಿ ಸಮಿತಿಯ ಅಧ್ಯಕ್ಷರಾದ ಡಾ. ಉಮಾಶ್ರೀ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದಾರೆ.



ಗುರುವಾರ ಶಾಸಕರ ಭವನದ ಸಮ್ಮೇಳನ ಸಭಾಂಗಣದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ವಸತಿ ಸಮಿತಿಯ ಸಭೆ ನಡೆಸಿದ ಬಳಿಕ ಸಮಿತಿಯ ಸದಸ್ಯರೊಂದಿಗೆ ಶಾಸಕರ ಭವನಕ್ಕೆ ದಿಢೀರ್ ಭೇಟಿ ಮಾಡಿದ ಉಪಸಭಾಪತಿಗಳು, ಶಾಸಕರ ಭವನದ ಕೊಠಡಿಗಳು, ಕಾರಿಡಾರ್ಗಳು ಹಾಗೂ ಆವರಣದ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ಕುಡಿಯುವ ನೀರು, ವಿದ್ಯುತ್ ಮತ್ತು ಪೀಠೋಪಕರಣಗಳ ವ್ಯವಸ್ಥೆ ಸಮರ್ಪಕವಾಗಿರಬೇಕು ಎಂದು ಹೇಳಿದರು.

ಮಹಿಳಾ ಶಾಸಕರಿಗೆ ಪ್ರತ್ಯೇಕ ಹೆಲ್ತ್ ಕ್ಲಬ್

ಮೊದಲಿಗೆ ಶಾಸಕರ ಭವನದ ಹೆಲ್ತ್ ಕ್ಲಬ್ ಗೆ ಭೇಟಿ ನೀಡಿ, ಶಾಸಕರುಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕು; ಅಗತ್ಯ ಸೌಲಭ್ಯಗಳ ಬಗ್ಗೆ ಅಧಿಕಾರಿಗಳು ನಿಗಾವಹಿಸಬೇಕು. ಸಾಧ್ಯವಾದರೆ ಮಹಿಳಾ ಶಾಸಕರಿಗೆ ಪ್ರತ್ಯೇಕವಾದ ಹೆಲ್ತ್ ಕ್ಲಬ್ ತೆರೆಯಬೇಕು ಎಂದು ಸಲಹೆ ನೀಡಿದರು.

ವಾಚಾಲಯಕ್ಕೆ ಶಾಸಕರು ಹೆಚ್ಚು ಬರುವಂತೆ ಮಾಡಬೇಕು. ಗ್ರಂಥಾಲಯದಲ್ಲಿ ಶಾಸಕರಿಗೆ ಶೌಚಾಲಯ ಕೊಠಡಿ ನಿರ್ಮಿಸಬೇಕು. ಪಂಚಕರ್ಮ ಚಿಕಿತ್ಸಾ ಕೇಂದ್ರವನ್ನು ಮತ್ತಷ್ಟು ಸುಸಜ್ಜಿತಗೊಳಿಸಬೇಕು. ಶಾಸಕರ ಚಿಕಿತ್ಸಾಲಯ ಕೇಂದ್ರದಲ್ಲಿ ಉತ್ತಮ ಸೇವೆ ನೀಡಬೇಕೆಂದು ಉಪಸಭಾಪತಿಗಳು ಸೂಚಿಸಿದರು.

ನೈರ್ಮಲ್ಯಕ್ಕೆ ಒತ್ತು ನೀಡಿ

ಶಾಸಕರ ಭವನದಲ್ಲಿರುವ ಕೊಠಡಿಗಳು, ಸಮ್ಮೇಳನ ಸಭಾಂಗಣಗಳು ಹಾಗೂ ಅಲ್ಲಿ ಒದಗಿಸಲಾಗುತ್ತಿರುವ ಮೂಲಸೌಕರ್ಯ ಮತ್ತು ನೈರ್ಮಲ್ಯದ ಸ್ಥಿತಿಗತಿಗಳನ್ನು ಅವರು ಹತ್ತಿರದಿಂದ ಪರಿಶೀಲಿಸಿದರು.

ಪ್ರತ್ಯೇಕ ಶೌಚಾಲಯ ನಿರ್ಮಿಸಿ

ನಂತರ ಶಾಸಕರ ಭವನದ ಹೊರಾಂಗಣ ಪರಿಶೀಲಿಸಿ, ಚಿಲುಮೆ,

3ನೇ ಪುಟಕ್ಕೆ

ಗ್ರಾಮೀಣ ಪ್ರದೇಶದ ಯುವಕರು ತಂತ್ರಜ್ಞಾನದ ಮೂಲಕ ಸುಶಿಕ್ಷಿತರಾಗಿ,ಪ್ರತಿಭೆ ವ್ಯಕ್ತಪಡಿಸಿ - ಡಾ.ಕರಿಗೂಳಿ

ಶ್ರೀರಾಮನಗರ: ತಾಲೂಕಿನ ಶ್ರೀರಾಮನಗರದ ಚಿಲುಕೂರಿ ನಾಗೇಶ್ವರ ರಾವ್ ಸರಕಾರಿ ಪ್ರಥಮ ದರ್ಜೆ ಕಾಲೇಜ್ ನಲ್ಲಿ ದಿನಾಂಕ : 09ನೇ ಅಕ್ಟೋಬರ್ 2026 ರಂದು 2026-27ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ,, ರೆಡ್ ಕ್ರಾಸ್ ,ಪ್ಲೇಸ್ ಮೆಂಟ್ ಸೆಲ್ ಮತ್ತು ಇತರೆ ಸಹಪಠ್ಯ ಚಟುವಟಿಕೆಗಳ ಉದ್ಘಾಟನೆ ಮತ್ತು ಪದವಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮ ವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಕಾಲೇಜಿನ ಪ್ರಾಂಶುಪಾಲರಾದ ಡಾ.ಕರಿಗೂಳಿಯವರು ವಿದ್ಯಾರ್ಥಿಗಳಿಗೆ ನಿಮ್ಮ ಕನಸುಗಳು



ದೊಡ್ಡದಾಗಿರಲಿ, ಆದರೆ ಮನಸ್ಸು ಸದಾ ವಿನಮ್ರವಾಗಿರಲಿ. ಯಶಸ್ಸು ಸಿಕ್ಕಾಗ ಗರ್ವಪಡಬೇಡಿ, ಸೋಲು ಬಂದಾಗ ಕುಗ್ಗಬೇಡಿ. ಪ್ರತಿಯೊಂದು ಅನುಭವವೂ ನಿಮ್ಮ ಬದುಕಿನ ಪಾಠವಾಗಲಿ ಎಂದು ಸಲಹೆ ನೀಡಿದರು, ಇದೇ ಸಂದರ್ಭದಲ್ಲಿ ಕಾಲೇಜಿನಲ್ಲಿ ತಂತ್ರಜ್ಞಾನ ಆಧಾರಿತವಾಗಿ ಕೌಶಲ್ಯಯುಕ್ತ,ಗುಣಮಟ್ಟ ಶಿಕ್ಷಣದ ಲಭ್ಯವಿದ್ದು, ಇದರ ಸದುಪಯೋಗ ಪಡೆಯುವಂತೆ ಕರೆ ನೀಡಿದರು. ಗ್ರಾಮೀಣ ಪ್ರತಿಭೆಗಳೇ ಈ ಜಗತ್ತಿನಲ್ಲಿ ಸಾಧನೆಯ ಮೇರು ಸ್ತರದಲ್ಲಿವೆ ಎನ್ನುವ ಕಾಲ ಬರಲಿ ಎಂದರು. ಉದ್ಘಾಟಕರಾದ ಡಾ.ಸರ್ಫರಾಜ್ ಅಹ್ಮದ ರವರು

ವಿದ್ಯಾರ್ಥಿಗಳು ಯಾವಾಗಲೂ ಧನಾತ್ಮಕ ಚಿಂತನೆಗಳಲ್ಲಿ ತೊಡಗಿದರೆ ತಮ್ಮ ಬದುಕು ಸುಂದರವಾಗಿರಲೂ ಸಾಧ್ಯ ಎಂದು ತಿಳಿಸಿದರು , ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥ ರಾದ ಶ್ರೀ ವೀರೇಶ ರವರು ಪ್ರಾಸ್ತಾವಿಕ ನುಡಿಯಲ್ಲಿ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿದರೆ ಮಾತ್ರ ಜ್ಞಾನದೊಂದಿಗೆ ಸಮಾಜದಲ್ಲಿ ಎಲ್ಲ

3ನೇ ಪುಟಕ್ಕೆ

ಗಾಂಧೀ ಸ್ಮೃತಿ, ಬೃಹತ್ ಜನಜಾಗೃತಿ ಸಮಾವೇಶ



ಕಲಬುರಗಿ,ಅ.09-

ಧರ್ಮಸ್ಥಳ ಕ್ಷೇತ್ರ ಹಾಗೂ ಶರಣಬಸವೇಶ್ವರ ಸಂಸ್ಥಾನವು ದಾಸೋಹ ತತ್ವದಡಿ ಸಮಾಜ ಸೇವೆಯಲ್ಲಿ ಅಣ್ಣ-ತಮ್ಮಂದಿರಂತೆ ಕಾರ್ಯನಿರ್ವಹಿಸುತ್ತಿರುವ ಧಾರ್ಮಿಕ ಕೇಂದ್ರಗಳಾಗಿವೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಹಾಗೂ ಶರಣಬಸವೇಶ್ವರ ವಿಶ್ವವಿದ್ಯಾಲಯದ ಕುಲಾಧಿಪತಿ ಮಾತೋಶ್ರೀ ಡಾ.ದಾಕ್ಷಾಯಿಣಿ ಎಸ್. ಅಪ್ಪ ಹೇಳಿದರು.

ನಗರದ ಶರಣಬಸವೇಶ್ವರ ದೇವಸ್ಥಾನದ ಅಖಿಲ ಭಾರತ ಶಿವಾನುಭವ ಮಂಟಪದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ವತಿಯಿಂದ ಆಯೋಜಿಸಿದ್ದ ಗಾಂಧೀ ಸ್ಮೃತಿ ಹಾಗೂ ಬೃಹತ್ ಜನಜಾಗೃತಿ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಧರ್ಮಸ್ಥಳ ಹಾಗೂ ಶರಣಬಸವೇಶ್ವರ ಸಂಸ್ಥಾನಗಳು ಶಿಕ್ಷಣ ಮತ್ತು ಸಮಾಜ ಸೇವೆಗೆ ಆದ್ಯತೆ ನೀಡಿ, ಕಾಯಕ ಹಾಗೂ ದಾಸೋಹದ ಮೂಲಕ ಸಮಾಜ ಪರಿವರ್ತನೆಗೆ ಶ್ರಮಿಸುತ್ತಿವೆ. ಶರಣಬಸವೇಶ್ವರ ಸಂಸ್ಥೆಯ ಶಿಕ್ಷಣ ಸಂಸ್ಥೆಗಳಲ್ಲಿ 300ಕ್ಕೂ ಹೆಚ್ಚು ಮಕ್ಕಳು ಉಚಿತ ಶಿಕ್ಷಣ ಪಡೆಯುತ್ತಿದ್ದು, ವೈದ್ಯಕೀಯ ಶಿಕ್ಷಣಕ್ಕೂ ಅವಕಾಶ ದೊರೆಯುತ್ತಿದೆ. ಇದರಿಂದ ಸಾಮಾನ್ಯ ಕುಟುಂಬಗಳ ಮಕ್ಕಳು ವೈದ್ಯರಾಗುವ ಕನಸು ನನಸಾಗುತ್ತಿದೆ ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ವ್ಯಸನಮುಕ್ತ ಸಮಾಜ ನಿರ್ಮಾಣ, ಗ್ರಾಮಾಭಿವೃದ್ಧಿ ಹಾಗೂ ರೈತರ ಸೇವೆಯ ಮೂಲಕ ಮಾನವೀಯ ಕಾರ್ಯದಲ್ಲಿ ತೊಡಗಿಸಿಕೊಂಡಿದೆ. ಗಾಂಧೀಜಿಯವರ ಆದರ್ಶಗಳನ್ನು ಪಾಲಿಸುವ ಮೂಲಕ ಸಮಾಜ ಸೇವೆ ನಡೆಸುತ್ತಿರುವುದು ಶ್ಲಾಘನೀಯ ಎಂದರು. ಈ ಸಂದರ್ಭದಲ್ಲಿ ವಿವಿಧ ಫಲಾನುಭವಿಗಳಿಗೆ ಮನೆ ಹಂಚಿಕೆ, ಪಿಂಚಣಿ ಪತ್ರ, ವಿದ್ಯಾರ್ಥಿವೇತನ, ವಿಕಲಚೇತನರಿಗೆ ವೀಲ್‌ಚೇರ್ ಶೌರ್ಯ ವಿಪತ್ತು ಕಾರ್ಯಕರ್ತರಿಗೆ ಸಲಕರಣೆ ಹಾಗೂ ಸರ್ಕಾರಿ ಶಾಲೆಗೆ ಅಧ್ಯಾಪಕರ ನೇಮಕಾತಿ ಪತ್ರಗಳನ್ನು ಹಸ್ತಾಂತರಿಸಲಾಯಿತು.

ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮಾತನಾಡಿ, ಮಹಾತ್ಮ ಗಾಂಧೀಜಿಯವರು ಬೋಧಿಸಿದ ಸತ್ಯ, ಅಹಿಂಸೆ, ಸತ್ಯಾಗ್ರಹ ಹಾಗೂ ಗ್ರಾಮಸ್ವರಾಜ್ಯದ ತತ್ವಗಳು ಇಡೀ ಜಗತ್ತಿಗೆ ಆದರ್ಶವಾಗಿವೆ. ಅವರು ಕೇವಲ ಸ್ವಾತಂತ್ರ್ಯ ಹೋರಾಟಗಾರರಾಗಿರದೆ ಸ್ವಾಭಿಮಾನಿ, ಸ್ವಾವಲಂಬಿ ಹಾಗೂ ಸಮೃದ್ಧ ಭಾರತ ನಿರ್ಮಾಣಕ್ಕೆ ಶ್ರಮಿಸಿದ ಮಹಾನ್ ಚೇತನರಾಗಿದ್ದರು ಎಂದರು.

ಗಾಂಧೀಜಿಯವರ ಆಶಯದಂತೆ ದುಶ್ಚಟಮುಕ್ತ ಹಾಗೂ ಪಾನನಿಷೇಧದ ಸಮಾಜ ನಿರ್ಮಾಣವಾಗಬೇಕು. ಆದರೆ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಜನಜಾಗೃತಿ ವೇದಿಕೆಯಂತಹ ಸಂಘಟನೆಗಳು ಜನರನ್ನು ಸಂಘಟಿಸಿ ಜಾಗೃತಿ ಮೂಡಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಹೇಳಿದರು. ಮದ್ಯನಿಷೇಧ ಅತ್ಯಂತ ಸೂಕ್ಷ್ಮ ವಿಷಯವಾಗಿದ್ದು, ಅಬಕಾರಿ ಇಲಾಖೆಯ ಆದಾಯವು ರಾಜ್ಯದ ಪ್ರಮುಖ ಆದಾಯ ಮೂಲಗಳಲ್ಲಿ ಒಂದಾಗಿದೆ. ಆದರೂ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಹೊಸ ಅಬಕಾರಿ ನೀತಿಯಡಿ ಹೆಚ್ಚು ಆಲ್ಕೋಹಾಲ್ ಹೊಂದಿರುವ ಮದ್ಯದ ಮೇಲೆ ಹೆಚ್ಚಿನ ತೆರಿಗೆ ವಿಧಿಸುವ ಮೂಲಕ ಮದ್ಯಪಾನಕ್ಕೆ ಕಡಿವಾಣ ಹಾಕುವ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸಮಾವೇಶಕ್ಕೂ ಮುನ್ನ ಜಗತ್ ವೃತ್ತದಿಂದ ಬೃಹತ್ ಜನಜಾಗೃತಿ ಜಾಥಾ ನಡೆಯಿತು. ಕಲಬುರಗಿ ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನರಸಿಂಹ ಮೆಂಡನ್ ಹಲಿಗೆ ಬಾರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು.

ರಾಜ್ಯಮಟ್ಟದ ಗಾಂಧಿ ಜಯಂತಿ ಅಂಗವಾಗಿ ನಡೆದ ಪ್ರಬಂಧ ಸ್ಪರ್ಧೆಯಲ್ಲಿ ಮೂರನೇ ಸ್ಥಾನ ಪಡೆದ ಆಳಂದ ಮಾತೋಶ್ರೀ ಅಂಬವ್ವ ರುಕ್ಮಯ್ಯ ಗುತ್ತೇದಾರ್ ಸ್ಮಾರಕ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ವಿಜಯಲಕ್ಷ್ಮಿ ಪೋದ್ದಾರ್ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಜನಜಾಗೃತಿ ವೇದಿಕೆಯ ಜಿಲ್ಲಾಧ್ಯಕ್ಷ ಸಿ.ಎನ್. ಬಾಬಳಗಾಂವ್ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಹೋಟೆಲ್ ಸಂಘದ ಉಪಾಧ್ಯಕ್ಷ ಸತ್ಯನಾಥ ಶೆಟ್ಟಿ, ಬ್ಯಾಂಕ್ ಆಫ್ ಬರೋಡಾ ಪ್ರಾದೇಶಿಕ ವ್ಯವಸ್ಥಾಪಕ ಅಮಿತ್ ಶೆಟ್ಟಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕ ದಿನೇಶ್ ಪೂಜಾರಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ್ ಯಡ್ರಾಮಿ ಸೇರಿದಂತೆ ಹಲವರು ಮಾತನಾಡಿದರು.

ಜನಜಾಗೃತಿ ವೇದಿಕೆಯ ಅನಿಲ್ ಕುಮಾರ್, ಡಾ. ಸದಾನಂದ ಪೆರ್ಲ, ಚಂದ್ರಶೇಖರ್ ಕರ್ಜಗಿ, ಶಿವಯ್ಯ ಸ್ವಾಮಿ ಬಿಬ್ಬಳ್ಳಿ, ಶಾಂತಪ್ಪ ಕೋರೆ, ಮಾಲತಿ ರೇಷ್ಮಿ, ಸಿದ್ದು ಹಿರೇಮಠ, ನರಸಮ್ಮ ಆವುಂಟಿ ಹಾಗೂ ನರಸಿಂಹ ಮೆಂಡನ್ ಉಪಸ್ಥಿತರಿದ್ದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಗಣಪತಿ ಮಾಳಂಜಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಲಕ್ಷ್ಮಿ ಪ್ರಾರ್ಥನಾ ಗೀತೆ ಹಾಡಿದರು. ಯೋಜನಾಧಿಕಾರಿ ಕೇಶವ ಕಾರ್ಯಕ್ರಮ ನಿರೂಪಿಸಿದರು. ಯೋಜನಾಧಿಕಾರಿ ಸಂಗಪ್ಪ ವಂದಿಸಿದರು.



ರಾಸೇಯೋ ಶಿಬಿರಗಳಿಂದ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ: ಶಶಿಕಾಂತ ಉಡಿಕೇರಿ

ಕಲಬುರಗಿ,ಅ,09-

ಯುವಕರು ರಾಷ್ಟ್ರ ನಿರ್ಮಾಣದ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲು ರಾಷ್ಟ್ರೀಯ ಸೇವಾ ಯೋಜನೆ (ರಾಸೇಯೋ) ಶಿಬಿರಗಳು ಪ್ರೋತ್ಸಾಹದಾಯಕವಾಗಿವೆ. ವಿದ್ಯಾರ್ಥಿಗಳು ನಾಯಕತ್ವ, ನಿಸ್ವಾರ್ಥ ಸೇವೆ ಹಾಗೂ ಸಾಮಾಜಿಕ ಕಾಳಜಿಯೊಂದಿಗೆ ಶಿಬಿರಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡರೆ ಸರ್ವತೋಮುಖ ಬೆಳವಣಿಗೆ ಸಾಧ್ಯ ಎಂದು ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಹೇಳಿದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಕೋಶದ ವತಿಯಿಂದ ಅ.2ರಿಂದ 8ರವರೆಗೆ ಜ್ಞಾನಗಂಗಾ ಆವರಣದಲ್ಲಿ ಆಯೋಜಿಸಿದ್ದ ಅಂತರ ಮಹಾವಿದ್ಯಾಲಯಗಳ ರಾಸೇಯೋ ವಿಶೇಷ ಶಿಬಿರದಲ್ಲಿ ಶಿಬಿರಾರ್ಥಿಗಳನ್ನುದ್ದೇಶಿಸಿ ಅವರು ಮಾತನಾಡಿದರು.

ರಾಸೇಯೋ ಶಿಬಿರಗಳು ವಿದ್ಯಾರ್ಥಿಗಳಲ್ಲಿ ನಿಸ್ವಾರ್ಥ ಸೇವಾ ಮನೋಭಾವ, ಮಾನವೀಯತೆ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುತ್ತವೆ. ಕಠಿಣ ಪರಿಸ್ಥಿತಿಗಳನ್ನು ಎದುರಿಸುವ ಸಾಮರ್ಥ್ಯ, ಸಕಾರಾತ್ಮಕ ಮನೋಭಾವ, ಆತ್ಮಸ್ಥೈರ್ಯ, ಧೈರ್ಯ ಹಾಗೂ ಸಾಮೂಹಿಕ ಶಕ್ತಿಯನ್ನು ಬೆಳೆಸಿಕೊಳ್ಳಲು ಇಂತಹ ಶಿಬಿರಗಳು ಸಹಕಾರಿಯಾಗುತ್ತವೆ. ಶಿಬಿರಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬಹುದು ಎಂದು ಹೇಳಿದರು.

ರಾಸೇಯೋ ಕಾರ್ಯಕ್ರಮ ಸಂಯೋಜನಾಧಿಕಾರಿ ಡಾ. ಹೆಚ್.ಎಸ್. ಜಂಗೆ ಮಾತನಾಡಿ, ಸಾರ್ವಜನಿಕ ಸೇವೆಯ ಮೂಲಕ ವಿದ್ಯಾರ್ಥಿಗಳು ಮೌಲಿಕ ಅನುಭವ ಹಾಗೂ ಮಾರ್ಗದರ್ಶನ ಪಡೆಯಬೇಕು. ಸೇವಾ ಚಟುವಟಿಕೆಗಳ ಮೂಲಕ ರಾಷ್ಟ್ರಪ್ರೇಮ ಮತ್ತು ಸೇವಾ ಮನೋಭಾವವನ್ನು ಬೆಳೆಸಿಕೊಳ್ಳುವುದು ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕುಲಸಚಿವ ಮೊಹಮ್ಮದ್ ಶಕೀಲ್, ಮೌಲ್ಯಮಾಪನ ಕುಲಸಚಿವೆ ಪ್ರೊ. ಅಶ್ವಿನಿ, ವಿತ್ತಾಧಿಕಾರಿ ಜಯಾಂಬಿಕ ಉಪಸ್ಥಿತರಿದ್ದರು. ವಿಶ್ವವಿದ್ಯಾಲಯದ ವಿವಿಧ ಮಹಾವಿದ್ಯಾಲಯಗಳ ರಾಸೇಯೋ ಘಟಕಗಳ ಕಾರ್ಯಕ್ರಮ ಅಧಿಕಾರಿಗಳಾದ ಡಾ. ಅವಿನಾಶ್ ಕಂಟಿಕರ್, ಡಾ. ವಿದ್ಯಾಸಾಗರ, ವಸಂತ್ ರಾಠೋಡ್ ಸೇರಿದಂತೆ ರಾಸೇಯೋ ಸ್ವಯಂಸೇವಕರು ಭಾಗವಹಿಸಿದ್ದರು.

ಶಿಬಿರಾರ್ಥಿಗಳಾದ ಪ್ರಕಾಶ್ ಎಸ್. ಹಾಗೂ ಮೇಘಾ ಪಾಟೀಲ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಐಶ್ವರ್ಯ ಸ್ವಾಗತಿಸಿದರು. ಸೌಂದರ್ಯ ಅಪ್ಪಾರಾಯ ಹಾಗೂ ಭಾಗ್ಯ ವಂದಿಸಿದರು. ಕೊನೆಯಲ್ಲಿ ಶಿಬಿರಾರ್ಥಿಗಳು ರಾಷ್ಟ್ರಗೀತೆ ಹಾಡಿದರು.

ಪ್ರೋಗ್ರಾಮಿಂಗ್ ಕೌಶಲ್ಯಗಳ ಕುರಿತು ಮೂರು ದಿನಗಳ ಕಾರ್ಯಾಗಾರ



ಬಾಗಲಕೋಟೆ,ಅ.09-

ಬಿ.ವಿ.ವಿ.ಎಸ್. ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬಿ.ಎಸ್ಸಿ . ಕಂಪ್ಯೂಟರ್ ಸೈನ್ಸ್ ವಿದ್ಯಾರ್ಥಿನಿಯರಿಗಾಗಿ ಆಯೋಜಿಸಿದ್ದ ‘ಪ್ರೋಗ್ರಾಮಿಂಗ್ ಕೌಶಲ್ಯಗಳು’ ಕುರಿತ ಮೂರು ದಿನಗಳ ಕಾರ್ಯಾಗಾರ ಸಮಾರೋಪಗೊಂಡಿತು.

ಸಮಾರೋಪದಲ್ಲಿ ಮಾತನಾಡಿದ ಬಸವೇಶ್ವರ ಎಂಜಿನಿಯರಿಂಗ್ ಕಾಲೇಜಿನ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ವೀರೇಶ ಬಿ. ಪಾಗಿ, ಪ್ರೋಗ್ರಾಮಿಂಗ್ ಕೇವಲ ಕೋಡ್ ಬರೆಯುವುದಕ್ಕೆ ಸೀಮಿತವಲ್ಲ. ಅದು ತಾರ್ಕಿಕ ಚಿಂತನೆ, ಸಮಸ್ಯೆ ಪರಿಹಾರ ಸಾಮರ್ಥ್ಯ ಹಾಗೂ ಪ್ರಾಯೋಗಿಕ ಕೌಶಲ್ಯಗಳನ್ನು ಬೆಳೆಸುವ ಪ್ರಮುಖ ಸಾಧನವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯೆ ಎಸ್.ಜೆ. ಒಡೆಯರ್, ಡಿಜಿಟಲ್ ಯುಗದಲ್ಲಿ ಪ್ರೋಗ್ರಾಮಿಂಗ್ ಕೌಶಲ್ಯಗಳ ಮಹತ್ವವನ್ನು ವಿವರಿಸಿ, ಇಂತಹ ಕಾರ್ಯಾಗಾರಗಳು ತರಗತಿ ಕಲಿಕೆ ಮತ್ತು ಉದ್ಯಮಾಧಾರಿತ ಕೌಶಲ್ಯಗಳ ನಡುವಿನ ಅಂತರವನ್ನು ಕಡಿಮೆ ಮಾಡುತ್ತವೆ ಎಂದರು. ಕಾರ್ಯಾಗಾರದಲ್ಲಿ ಡಾ. ಜಿ.ಬಿ. ಚಿತ್ತಾಪುರ, ಪ್ರೊ. ಎಸ್.ಎಂ. ಮಾಗಿ, ಡಾ. ಸಿ.ಎಂ. ವೀರೇಂದ್ರ ಕುಮಾರ್ ಹಾಗೂ ಡಾ. ವಸುಧಾ ಬೋನಾಳ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಜಾವಾ, ಸಿ ಪ್ರೋಗ್ರಾಮಿಂಗ್ ಹಾಗೂ ಅಲ್ಗಾರಿದಮ್‌ಗಳ ವಿನ್ಯಾಸ ಮತ್ತು ವಿಶ್ಲೇಷಣೆ ಕುರಿತು ಪ್ರಾಯೋಗಿಕ ಮಾಹಿತಿ ನೀಡಿದರು.

ಐಕ್ಯೂಎಸಿ ಸಂಯೋಜಕಿ ಪಿ.ಕೆ. ಚೌಗುಲ ಉಪಸ್ಥಿತರಿದ್ದರು. ವಿಭಾಗದ ಮುಖ್ಯಸ್ಥ ಎಂ.ಎಚ್. ಜನ್ನಪ್ಪಗೋಳ ಸ್ವಾಗತಿಸಿದರು. ಶೈಲಾ ಗಣಾಚಾರಿ ನಿರೂಪಿಸಿದರು. ಪ್ರಿಯಾ ಪತ್ತಾರ ವಂದಿಸಿದರು. ಉಪನ್ಯಾಸಕರು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಕೆಕೆಆರ್‌ಡಿಬಿ ಅನುದಾನ ಬಳಸಿ



ಕಲಬುರಗಿ,ಅ.09-

ಕೆಕೆಆರ್‌ಡಿಬಿ ಅನುದಾನವನ್ನು ಜಿಲ್ಲೆಯ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಗೆ ಸಮರ್ಪಕವಾಗಿ ಬಳಸಬೇಕು. ಸರ್ಕಾರಿ ಶಾಲೆಗಳಲ್ಲಿನ ಶಿಕ್ಷಕರ ಕೊರತೆ ನೀಗಿಸುವುದು, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಒದಗಿಸುವುದು ಸೇರಿದಂತೆ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಲು ಈ ಅನುದಾನವನ್ನು ಬಳಸಬೇಕು ಎಂದು ಪ್ರಗತಿಪರ ಚಿಂತಕಿ ಮಿನಾಕ್ಷಿ ಬಾಳಿ ಒತ್ತಾಯಿಸಿದರು.

ನಗರದ ಕನ್ನಡ ಭವನದಲ್ಲಿ ಸರ್ಕಾರಿ ಶಾಲೆಗಳ ಉಳಿವು, ಸರ್ಕಾರಿ ಹಾಸ್ಟೆಲ್‌ಗಳ ಬಲವರ್ಧನೆ, 371(ಜೆ) ಕಲಂ ಸಮರ್ಪಕ ಜಾರಿ ಹಾಗೂ ಜಿಲ್ಲೆಯ ಸಮಗ್ರ ಶೈಕ್ಷಣಿಕ ಬೇಡಿಕೆಗಳ ಈಡೇರಿಕೆಗಾಗಿ ಎಸ್‌ಎಫ್‌ಐ ಜಿಲ್ಲಾ ಸಮ್ಮೇಳನ ನಡೆಯಿತು. ಸಮ್ಮೇಳನಕ್ಕೂ ಮುನ್ನ ಎಸ್‌ಎಫ್‌ಐ ಶ್ವೇತ ಪತಾಕೆ ಹಾರಿಸಲಾಯಿತು.

ಸಸಿಗೆ ನೀರುಣಿಸುವ ಮೂಲಕ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಮಿನಾಕ್ಷಿ ಬಾಳಿ, ಶಿಕ್ಷಣವು ಪ್ರತಿಯೊಬ್ಬರ ಬದುಕನ್ನು ಬದಲಿಸುವ ಪ್ರಮುಖ ಅಸ್ತ್ರವಾಗಿದೆ. ಇಂದಿಗೂ ತಳ ಸಮುದಾಯದ ಅನೇಕ ಜನರು ಶಿಕ್ಷಣದಿಂದ ವಂಚಿತರಾಗಿದ್ದಾರೆ. ಮಹಿಳೆಯರಿಗೆ ಶಿಕ್ಷಣ ದೊರಕಿಸುವ ನಿಟ್ಟಿನಲ್ಲಿ ಜ್ಯೋತಿಬಾ ಫುಲೆ, ಸಾವಿತ್ರಿ ಬಾಯಿ ಫುಲೆ ಹಾಗೂ ಫಾತಿಮಾ ಶೇಖ್ ಅವರು ನಡೆಸಿದ ಹೋರಾಟಗಳು ಸ್ಫೂರ್ತಿದಾಯಕವಾಗಿವೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಶಿಕ್ಷಣ ಸೇರಿದಂತೆ ಹಲವು ಮೂಲಭೂತ ಹಕ್ಕುಗಳನ್ನು ಖಾತ್ರಿಪಡಿಸಿದ್ದಾರೆ ಎಂದು ಹೇಳಿದರು.

ಭಗತ್‌ಸಿಂಗ್ ಸೇರಿದಂತೆ ಕ್ರಾಂತಿಕಾರಿಗಳು ಯುವಜನರು ಹಾಗೂ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಿದ್ದರು. ಅವರ ಸ್ಫೂರ್ತಿಯಿಂದ ವಿದ್ಯಾರ್ಥಿಗಳು ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಬೇಕು. ಅನ್ಯಾಯ ಎಲ್ಲಿ ನಡೆದರೂ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳ ಪ್ರಜಾಸತ್ತಾತ್ಮಕ ಹಕ್ಕುಗಳ ರಕ್ಷಣೆಗಾಗಿ ಎಸ್‌ಎಫ್‌ಐ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಅವರು ಹೇಳಿದರು.

ಕಲಬುರಗಿ ಜಿಲ್ಲೆಯಲ್ಲಿ ಕೆಕೆಆರ್‌ಡಿಬಿಯಿಂದ ಬರುವ ಅನುದಾನ ಸಮರ್ಪಕವಾಗಿ ಬಳಕೆಯಾಗುತ್ತಿಲ್ಲ. ಬಳಕೆಯಾಗುತ್ತಿದ್ದರೂ ಶಿಕ್ಷಣ ಕ್ಷೇತ್ರಕ್ಕೆ ಅಗತ್ಯವಿರುವ ರೀತಿಯಲ್ಲಿ ವಿನಿಯೋಗವಾಗುತ್ತಿಲ್ಲ. ಆದ್ದರಿಂದ ಶಾಲೆಗಳನ್ನು ಬಲಪಡಿಸಲು, ಶಿಕ್ಷಕರ ಕೊರತೆ ನೀಗಿಸಲು ಹಾಗೂ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಕೆಕೆಆರ್‌ಡಿಬಿ ಅನುದಾನವನ್ನು ಬಳಸಬೇಕು ಎಂದು ಆಗ್ರಹಿಸಿದರು.

ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಗಣೇಶ್ ರಾಥೋಡ್ ಹಾಗೂ ಎಸ್‌ಎಫ್‌ಐ ಜಿಲ್ಲಾಧ್ಯಕ್ಷ ಸರ್ವೇಶ್ ಮಾವಿನಕರ್ ಮಾತನಾಡಿದರು. ಎಸ್‌ಎಫ್‌ಐ ಜಿಲ್ಲಾ ಕಾರ್ಯದರ್ಶಿ ಸುಜಾತ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜ್ಯ ಸಮಿತಿ ಸದಸ್ಯ ಇಮಾಮ್ ಸಾಬ್ ಕಾರ್ಯಕ್ರಮ ನಿರೂಪಿಸಿದರು.

ಅಖಿಲ ಭಾರತ ವಕೀಲರ ಒಕ್ಕೂಟದ ಮುಖಂಡ ಚಂದ್ರಕಾಂತ್, ಶ್ರೀನಿವಾಸ್, ವಿಠೋಬ ಜಾದವ್, ಪ್ರದೀಪ್, ಬೃಂದಾ, ಮಂಜು, ಅಂಕಿತ, ಅಕ್ಷರ, ತುಶಿತ್ ಸೇರಿದಂತೆ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ಪ್ರತಿನಿಧಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಸ್.ಐ.ಆರ್ : ವಿವಿಧ ರಾಜಕೀಯ ಪಕ್ಷಗಳೊಂದಿಗೆ ಡಿಸಿ ಸಭೆ

ಶೇ.96.15 ರಷ್ಟು ನೋಟಿಸ್‌ಗಳ ವಿಚಾರಣೆ, 1,828 ವಿಚಾರಣೆಗೆ ಬಾಕಿ



ಬಾಗಲಕೋಟೆ,ಅ.09-

ವಿಶೇಷ ತೀವ್ರ ಪರಿಷ್‌ರಣೆ (ಎಸ್ ಐಆರ್) ಪ್ರಕ್ರಿಯೆಯ ಹಿನ್ನೆಲೆಯಲ್ಲಿ ಡಿಸಿಟೈಸೇಷನ್ ಪೂರ್ಣಗೊಂಡ ನಂತರ ಮತದಾರರಿಗೆ ನೀಡಲಾದ ನೋಟಿಸ್ ವಿಚಾರಣೆ ಕಾರ್ಯದಲ್ಲಿ ಶೇ.96.15 ರಷ್ಟು ಪ್ರಗತಿ ಸಾಧಿಸಲಾಗಿದ್ದು, 1828 ನೋಟಿಸ್‌ಗಳಿಗೆ ವಿಚಾರಣೆ ಮಾತ್ರ ಬಾಕಿ ಉಳಿದಿವೆ ಎಂದು ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮತದಾರರ ಪಟ್ಟಿಯ ಪರಿಷ್ಕರಣೆ, ನೋಟಿಸ್‌ಗಳ ವಿಚಾರಣೆ ಹಾಗೂ ಹಕ್ಕು ಮತ್ತು ಆಕ್ಷೇಪಣೆಗಳಿಗೆ ಸಂಬಂಧಿಸಿದ ಅರ್ಜಿಗಳ ವಿಲೇವಾರಿ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಿದರು.

ಆಗಸ್ಟ್ 17 ರಂದು ಡಿಜಿಟೈಜೇಸನ್ ಪೂರ್ಣಗೊಂಡ ಬಳಿಕ ಅಸಂಗತಿಗಳು ಹಾಗೂ ಮ್ಯಾಪಿಂಗ್ ಆಗದ ಮತದಾರರಿಗೆ ದಿನಾಂಕ ನಿಗದಿಪಡಿಸಿ, ಅಗತ್ಯ ದಾಖಲೆಗಳನ್ನು ಹಾಜರುಪಡಿಸುವಂತೆ ಒಟ್ಟು 47,430 ಮತದಾರರಿಗೆ ನೋಟಿಸ್ ನೀಡಲಾಗಿತ್ತು. ಈ ಪೈಕಿ 45,605 ಮತದಾರರ ವಿಚಾರಣೆ ಪೂರ್ಣಗೊಂಡಿದ್ದು, 1,828 ನೋಟಿಸ್‌ಗಳ ವಿಚಾರಣೆ ಬಾಕಿ ಇರುವುದಾಗಿ ತಿಳಿಸಿದರು. ಬಾಕಿ ಇರುವ ವಿಚಾರಣೆಗಳನ್ನು ಶೀಘ್ರ ಪೂರ್ಣಗೊಳಿಸಲು ವಿವಿಧ ರಾಜಕೀಯ ಪಕ್ಷಗಳ ಸಹಕಾರ ಅಗತ್ಯವಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಮತದಾರರ ನೋಂದಣಾಧಿಕಾರಿಗಳ ಮೂಲಕ ಮತಗಟ್ಟೆ ಮಟ್ಟದ ಅಧಿಕಾರಿಗಳು ಮತದಾರರ ಮನೆಗಳಿಗೆ ತೆರಳಿ ಅಗತ್ಯ ದಾಖಲೆಗಳನ್ನು ಪಡೆದು, ಮತದಾರರ ವಿವರಗಳನ್ನು ಅಂತಿಮಗೊಳಿಸುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ರಾಜಕೀಯ ಪಕ್ಷಗಳ ಮುಖಂಡರು ತಮ್ಮ ಬೂತ್ ಮಟ್ಟದ ಏಜೆಂಟರಿಗೆ ಸೂಕ್ತ ಮಾರ್ಗದರ್ಶನ ನೀಡಿ, ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಸಹಕರಿಸುವಂತೆ ಕೋರಲಾಯಿತು.


ಹಕ್ಕು ಮತ್ತು ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಜೂನ್ 16 ರಿಂದ ಸೆಪ್ಟೆಂಬರ್ 23ರ ವರೆಗೆ ನಮೂನೆ-6ಕ್ಕೆ 15,827, ನಮೂನೆ-7ಕ್ಕೆ 1,656 ಹಾಗೂ ನಮೂನೆ-8ಕ್ಕೆ 20,881 ಅರ್ಜಿಗಳು ಸ್ವೀಕೃತಗೊಂಡಿವೆ.

ನಮೂನೆ-6ರ 15,827 ಅರ್ಜಿಗಳ ಪೈಕಿ 15,192 ಅರ್ಜಿಗಳನ್ನು ಇ-ರೋಲ್‌ನಲ್ಲಿ ನವೀಕರಿಸಲಾಗಿದ್ದು, 34 ಅರ್ಜಿಗಳು ಬಾಕಿ ಇವೆ. ನಮೂನೆ-7ರ 1,656 ಅರ್ಜಿಗಳ ಪೈಕಿ 749 ಅರ್ಜಿಗಳು ನವೀಕರಣಗೊಂಡು 13 ಬಾಕಿ ಉಳಿದಿವೆ. ನಮೂನೆ-8ರ 20,881 ಅರ್ಜಿಗಳ ಪೈಕಿ 19,634 ಅರ್ಜಿಗಳನ್ನು ನವೀಕರಣಗೊಂಡಿದ್ದು, 5 ಮಾತ್ರ ಬಾಕಿ ಉಳಿದಿವೆ ಎಂದು ತಿಳಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಸಂದರ್ಭದಲ್ಲಿ ಎ.ಎಸ್.ಡಿ.ಡಿ ಎಂದು ಗುರುತಿಸಲಾದ ಮತದಾರರನ್ನು ಮತದಾರರ ಪಟ್ಟಿಗೆ ನೋಂದಾಯಿಸಲು ವಿಶೇಷ ಅಭಿಯಾನ ನಡೆಸುವಂತೆ ನಿರ್ದೇಶಿಸಲಾಗಿದೆ. ನಮೂನೆ-6 ಸಲ್ಲಿಸುವ ಸಂದರ್ಭದಲ್ಲಿ ಯಾವುದೇ ಘೋಷಣಾ ಪತ್ರ ಸಲ್ಲಿಸುವ ಅಗತ್ಯವಿಲ್ಲ ಎಂದು ಸಭೆಯಲ್ಲಿ ತಿಳಿಸಲಾಯಿತು. ರಾಜಕೀಯ ಪಕ್ಷಗಳ ಮುಖಂಡರು ತಮ್ಮ ಮತಗಟ್ಟೆ ವ್ಯಾಪ್ತಿಯಲ್ಲಿ ಯಾವುದೇ ಅರ್ಹ ಮತದಾರರ ಹೆಸರು ಮತದಾರರ ಪಟ್ಟಿಯಿಂದ ಬಿಟ್ಟುಹೋಗಿದ್ದಲ್ಲಿ, ಅಂತಹ ಮತದಾರರು ಹೆಸರು ನೋಂದಾಯಿಸಿಕೊಳ್ಳುವಂತೆ ಹೆಚ್ಚಿನ ಪ್ರಚಾರ ಹಾಗೂ ಜಾಗೃತಿ ಮೂಡಿಸುವಂತೆ ಜಿಲ್ಲಾಧಿಕಾರಿಗಳು ಕೋರಿದರು.

ಸಭೆಯಲ್ಲಿ ಚುನಾವಣಾ ಶಿರಸ್ತೇದಾರ ಮಹೇಶ ಪಾಂಡವ, ಚುನಾವಣಾ ವಿಷಯ ನಿರ್ವಾಹಕ ರಾಘು ಥವಳಗಿ, ತಾಂತ್ರಿಕ ಸಹಾಯಕ ಸಂತೋಷ ಜೇವರಗಿ ಸೇರಿದಂತೆ ವಿವಿಧ ರಾಜಕೀಯ ಮುಖಂಡರಾದ ಕೃಷ್ಣಾ ಪಾಟೀಲ, ಎಂ.ಎಂ. ಮುತ್ತಪ್ಪನವರ, ಪಿ.ಎಂ.ಹಳ್ಳೂರ ಉಪಸ್ಥಿತರಿದ್ದರು.

ಬೆಂಬಲ ಬೆಲೆ ಯೋಜನೆಯಡಿ ಹೆಸರು, ಸೋಯಾಬೀನ್, ಸೂರ್ಯಕಾಂತಿ ಖರೀದಿಗೆ ನಿರ್ಧಾರ



ಕಲಬುರಗಿ,ಅ.09-

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆದ ಎಫ್‌ಎಕ್ಯೂ ಗುಣಮಟ್ಟದ ಹೆಸರು ಕಾಳು, ಸೋಯಾಬೀನ್ ಹಾಗೂ ಸೂರ್ಯಕಾಂತಿ ಕೃಷಿ ಉತ್ಪನ್ನಗಳನ್ನು ಖರೀದಿಸಲು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ನಿರ್ಧರಿಸಿದೆ.

ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ರಾಜ್ಯ ಸರ್ಕಾರದ ಅ.1, 2026ರ ಆದೇಶದಂತೆ ಹೆಸರು ಕಾಳನ್ನು ಪ್ರತಿ ಕ್ವಿಂಟಾಲ್‌ಗೆ 8,780 ರೂ., ಸೋಯಾಬೀನ್‌ಗೆ 5,708 ರೂ. ಹಾಗೂ ಸೂರ್ಯಕಾಂತಿಗೆ 8,343 ರೂ. ಬೆಂಬಲ ಬೆಲೆಯಲ್ಲಿ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹಾಗೂ ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಜಂಟಿ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಹೆಸರು ಕಾಳಿಗೆ ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್, ಸೋಯಾಬೀನ್‌ಗೆ ಪ್ರತಿ ಎಕರೆಗೆ ಗರಿಷ್ಠ 5 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 25 ಕ್ವಿಂಟಾಲ್ ಮತ್ತು ಸೂರ್ಯಕಾಂತಿಗೆ ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್ ಪ್ರಮಾಣದಲ್ಲಿ ಖರೀದಿಸಲಾಗುವುದು.

ರೈತರು ಹೆಸರು ಕಾಳು, ಸೋಯಾಬೀನ್ ಹಾಗೂ ಸೂರ್ಯಕಾಂತಿ ಮಾರಾಟಕ್ಕಾಗಿ ಡಿಸೆಂಬರ್ 19, 2026ರೊಳಗೆ ನೋಂದಣಿ ಮಾಡಿಕೊಳ್ಳಬೇಕು. ಡಿಸೆಂಬರ್ 29ರವರೆಗೆ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶವಿದೆ. ನೋಂದಣಿ ಹಾಗೂ ಖರೀದಿ ಪ್ರಕ್ರಿಯೆ ಏಕಕಾಲದಲ್ಲಿ ನಡೆಯಲಿದ್ದು, ರೈತರಿಂದ ಖರೀದಿಸಿದ ಉತ್ಪನ್ನದ ಮೊತ್ತವನ್ನು ಡಿಬಿಟಿ ಪೋರ್ಟಲ್ ಮೂಲಕ ಪಾವತಿಸಲಾಗುವುದು.

ಪ್ರತಿಯೊಂದು ಖರೀದಿ ಕೇಂದ್ರದಲ್ಲೂ ಪಿಒಎಸ್ ಯಂತ್ರದ ಮೂಲಕ ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆ ನಡೆಸಲಾಗುತ್ತದೆ. ಈ ಸಂದರ್ಭದಲ್ಲಿ ಯುಐಡಿಎಐ ಬಯೋಮೆಟ್ರಿಕ್ ದೃಢೀಕರಣ ಕಡ್ಡಾಯವಾಗಿರುತ್ತದೆ.

ಜಿಲ್ಲೆಯಲ್ಲಿ ಹೆಸರು ಕಾಳು ಖರೀದಿಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ ಹಾಗೂ ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ, ಸೋಯಾಬೀನ್ ಖರೀದಿಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ ಮತ್ತು ಸೂರ್ಯಕಾಂತಿ ಖರೀದಿಗೆ ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತ ಸಂಸ್ಥೆಗಳನ್ನು ಖರೀದಿ ಸಂಸ್ಥೆಗಳಾಗಿ ನೇಮಿಸಲಾಗಿದೆ.

ಜಿಲ್ಲೆಯಲ್ಲಿ ಹೆಸರು ಕಾಳು ಖರೀದಿಗೆ 67 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಎಫ್‌ಪಿಒಗಳನ್ನು, ಸೋಯಾಬೀನ್ ಖರೀದಿಗೆ 55 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಎಫ್‌ಪಿಒಗಳನ್ನು ಮತ್ತು ಸೂರ್ಯಕಾಂತಿ ಖರೀದಿಗೆ 11 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಖರೀದಿ ಕೇಂದ್ರಗಳಾಗಿ ಗುರುತಿಸಲಾಗಿದೆ.

ರೈತರು ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಎಫ್‌ಪಿಒಗಳನ್ನು ಸಂಪರ್ಕಿಸಿ, ನಿಗದಿತ ಅವಧಿಯಲ್ಲಿ ನೋಂದಣಿ ಮಾಡಿಕೊಂಡು ತಮ್ಮ ಎಫ್‌ಎಕ್ಯೂ ಗುಣಮಟ್ಟದ ಉತ್ಪನ್ನಗಳನ್ನು ಮಾರಾಟ ಮಾಡುವ ಮೂಲಕ ಬೆಂಬಲ ಬೆಲೆ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

ಹೆಸರು ಕಾಳು ಹಾಗೂ ಸೋಯಾಬೀನ್ ನೋಂದಣಿ ಮತ್ತು ಖರೀದಿಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತವನ್ನು 9449864446 ಸಂಖ್ಯೆಯಲ್ಲಿ, ಹೆಸರು ಕಾಳು ನೋಂದಣಿ ಹಾಗೂ ಖರೀದಿಗೆ ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯನ್ನು 9448641163 ಸಂಖ್ಯೆಯಲ್ಲಿ ಹಾಗೂ ಸೂರ್ಯಕಾಂತಿ ನೋಂದಣಿ ಮತ್ತು ಖರೀದಿಗೆ ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತವನ್ನು 9591812142 ಸಂಖ್ಯೆಯಲ್ಲಿ ಸಂಪರ್ಕಿಸಬಹುದು.

ನಾನಾ ಪಾಟೇಕರ್ ನಿಧನ: ವೀರಣ್ಣ ಚರಂತಿಮಠ ಸಂತಾಪ

ಬಾಗಲಕೋಟೆ,ಅ.09- ಹಿರಿಯ ನಟ, ಪದ್ಮಶ್ರೀ ಪುರಸ್ಕೃತ ನಾನಾ ಪಾಟೇಕರ್ ಅವರ ನಿಧನಕ್ಕೆ ಮಾಜಿ ಶಾಸಕ ಹಾಗೂ ಬಿ.ವಿ.ವಿ. ಸಂಘದ ಕಾರ್ಯಾಧ್ಯಕ್ಷರಾದ ಡಾ. ವೀರಣ್ಣ ಚರಂತಿಮಠ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.

ನಾನಾ ಪಾಟೇಕರ್ ಅವರ ಪ್ರಭಾವಶಾಲಿ ಅಭಿನಯ, ವಿಶಿಷ್ಟ ಸಂಭಾಷಣಾ ಶೈಲಿ ಹಾಗೂ ಬಹುಮುಖ ಪ್ರತಿಭೆ ಭಾರತೀಯ ಚಿತ್ರರಂಗದಲ್ಲಿ ಅಳಿಸಲಾಗದ ಛಾಪು ಮೂಡಿಸಿದೆ. ರೈತರು ಸೇರಿದಂತೆ ಸಾಮಾಜಿಕ ಕ್ಷೇತ್ರದಲ್ಲಿ ಅವರು ತೋರಿದ ಕಾಳಜಿಯೂ ಸ್ಮರಣೀಯ ಎಂದು ಚರಂತಿಮಠ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಎಸ್‌ಐಆರ್ ರದ್ದುಪಡಿಸಲು ಆಗ್ರಹಿಸಿ ಕಾಂಗ್ರೆಸ್ ಪ್ರತಿಭಟನೆ

ಸದಸ್ಯ ವಸಂತ್ ಕುಮಾರ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಮಾಜಿ ಪಾಲಿಕೆ ಸದಸ್ಯ ಜಯಣ್ಣ, ಶ್ರೀನಿವಾಸ್ ರೆಡ್ಡಿ, ಶ್ರೀದೇವಿ ನಾಯಕ, ವಿಶ್ವನಾಥ ಪಟ್ಟಿ, ಮಹಮ್ಮದ್ ಶಾಲಂ, ನರಸಿಂಹಲು ಮಾಡಗಿರಿ, ಕೆ.ಜಿ. ವಿರೇಶ್, ರಜಾಕ್ ಉಸ್ತಾದ್, ಮಾರೆಪ್ಪ ಹರವಿ, ಶ್ರೀದೇವಿ ನಾಯಕ, ಜಯಣ್ಣ, ಜಿ.ಶಿವಮೂರ್ತಿ, ರುದ್ರಪ್ಪ ಅಂಗಡಿ, ಅಮರೇಗೌಡ ಹಂಚಿನಾಳ, ಗಿರಿಯಪ್ಪ ನೆಲಹಾಳ, ನಿರ್ಮಲಾ ಬೆಣ್ಣೆ, ಆರತಿ, ಮಂಜುಳಾ ಅಮರೇಶ, ರಝಿಯಾ ಸುಲ್ತಾನ, ಶಶಿಕಲಾ ಭೀಮಾರಾಯ ಮತ್ತಿತರರು ಇದ್ದರು.

ನೂತನ ಗರ್ಭನಿರೋಧಕ ಇಂಪ್ಲಾಟ್ ತರಬೇತಿ ಕಾರ್ಯಾಗಾರ

ಮಕ್ಕಳ ನಡುವಿನ ಅಂತರಕ್ಕೆ ಪರಿಣಾಮಕಾರಿ ಯೋಜನೆ: ಡಾ.ಚಂದ್ರಿಕಾ

ಫಲವತ್ತಾದ ಅಂಡಾಣು ಅಳವಡಿಕೆಯಾಗುವುದನ್ನು ತಡೆಯುತ್ತದೆ ಎಂದರು.

ಹಾರ್ಮೋನಿನ ಹೆಚ್ಚು ಪರಿಣಾಮಕಾರಿಯಾದ ಮತ್ತು ಹಿಮ್ಮುಖಗೊಳಿಸಬಹುದಾದ ವಿಧಾನವಾಗಿದೆ. ಅರ್ಹ ದಂಪತಿಗಳಿಗೆ ಈ ಸೌಲಭ್ಯ ಒದಗಿಸುವುದರಿಂದ ಮಹಿಳೆಯರ ಆರೋಗ್ಯ ರಕ್ಷಣೆಯಾಗುವುದರ ಜೊತೆಗೆ ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಗಣನೀಯವಾಗಿ ತಗ್ಗಿಸಬಹುದು ಎಂದು ಅವರು ವಿವರಿಸಿದರು.

ಈ ವೇಳೆ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ಶಿವಕುಮಾರ್ ನಾರಾ ಅವರು ಮಾತನಾಡಿ, ಜಿಲ್ಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ನಂದಿತಾ ಎಮ್ ಎನ್ ಅವರ ಮಾರ್ಗದರ್ಶನದಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳು ಇಲ್ಲಿ ಪಡೆದ ಮಾಹಿತಿಯನ್ನು ಕ್ಷೇತ್ರ ಮಟ್ಟದಲ್ಲಿ ಅರ್ಹ ದಂಪತಿಗಳಿಗೆ, ಹಾಗೂ ಅರ್ಹರಿಗೆ ಈ ಬಗ್ಗೆ ಸೂಕ್ತ ಅರಿವು ಮೂಡಿಸಿ, ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿ ತಾಯಿ ಅರೋಗ್ಯದ ಸ್ಥಿರೀಕರಣಕ್ಕೆ ಕೈಜೊಡಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಡಬ್ಲ್ಯೂಹೆಚ್‌ಓ ಸಹಭಾಗಿತ್ವದ ಐಪಿಇ ಗ್ಲೋಬಲ್ ಲಿಮಿಟೆಡ್ ದೆಹಲಿ ಕಾರ್ಯಕ್ರಮ ವ್ಯವಸ್ಥಾಪಕರಾದ ಶೋಭನಾ ಸಿಂಗ್,ತಾಲೂಕು ಆರೋಗ್ಯಾಧಿಕಾರಿ ಡಾ.ಆರ್.ವಿ.ನಾಯಕ, ಡಾ.ಶರಣಬಸವರಾಜ್, ಡಾ.ಸತೀಶ್, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಪುಂಡಲಿಕ ಗಂಜಿ, ಕುಟುಂಬ ಕಲ್ಯಾಣ ವಿಭಾಗದ ಅಮರೇಶ್ ಗಡ್ಡಿ, ನಾಗರಾಜ್ ಜಗತಾಪ್, ಹರೀಶ್ ಪತಂಗೆ, ರಾಜಶೇಖರ್ ಸೇರಿದಂತೆ ವೈದ್ಯರು, ಫಾರ್ಮಸಿ ಅಧಿಕಾರಿ, ಹಿರಿಯ ಹೆಚ್‌ಐಓ, ಹಿರಿಯ ಪಿಹೆಚ್‌ಸಿಓ, ಹೆಚ್‌ಐಓ, ಪಿಹೆಚ್‌ಸಿಓ, ಸಿಹೆಚ್‌ಓ, ಆಶಾ ಮೇಲ್ವಿಚಾರಕರು ಆಶಾ ಕಾರ್ಯಕರ್ತೆಯರು ಹಾಗೂ ಇಲಾಖೆಯ ಇತರೆ ಸಿಬ್ಬಂದಿಗಳು ಭಾಗಿಯಾಗಿದ್ದರು.

ಸಕಾಲಕ್ಕೆ ಮಾಹಿತಿ ನೀಡದ ಅಧಿಕಾರಿಗಳಿಗೆ ಮಾಹಿತಿ ಆಯೋಗದಿಂದ ದಂಡ ವಿಧಿಸಿ ಆದೇಶ

ಸಹಾಯಕರಾಗಿದ್ದ ಸೂರ್ಯಕಾಂತಗೆ ಬೋಳಮಾನದೊಡ್ಡಿ ಗ್ರಾಮಪಂಚಾಯತ ಕಾರ್ಯದರ್ಶಿ ಮಲ್ಲಿಕಾರ್ಜುನಗೆ 10 ಸಾವಿರ, ಕಲಬುರಗಿ ಪಾಲಿಕೆ ಪರಿಸರ ಅಭಿಯಂತ ಅಭಯಕುಮಾರಗೆ 10 ಸಾವಿರ, ಕುಷ್ಟಗಿ ತಾಲೂಕಿನ ಜುಮಾಲ್ಮಪೂರ ಗ್ರಾಮ ಪಂಚಾಯತ್ ಕಾರ್ಯದರ್ಶಿ ಗುರಪ್ಪ ನಾಯಕಗೆ 10 ಸಾವಿರ ಹಾಗೂ ಹೊಸಪೇಟೆ ತಾಲೂಕಿನ ನಾಗಲಾಪುರ ಗ್ರಾಮ ಪಂಚಾಯತ್ ಕಾರ್ಯದರ್ಶಿ ರವಿಕುಮಾರಗೆ 10 ಸಾವಿರ ದಂಡ ವಿಧಿಸಿ ಆದೇಶ ಮಾಡಲಾಗಿದೆ.

ಪ್ರತಿವಾದಿ ಅಧಿಕಾರಿಗಳಿಗೆ ವಿಧಿಸಿದ ದಂಡ ಅವರ ಬರುವ ತಿಂಗಳ ವೇತನದಲ್ಲಿ ಕಡಿತಗೊಳಿಸಿ ಆಯೋಗ ಸೂಚಿಸಿದ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಿ ರಶೀದಿ ಆಯೋಗಕ್ಕೆ ಸಲ್ಲಿಸಲು ಅನುಕ್ರಮವಾಗಿ ದಂಡನೆಗೊಳಪಟ್ಟ ಮೇಲಾಧಿಕಾರಿಗಳಿಗೆ ಆಯೋಗ ಆದೇಶ ಮಾಡಿದೆ.

ಆಯೋಗದ ಆದೇಶ ದಂಡ ಪಾವತಿ ಮಾಡಬೇಕು ಹಾಗೂ ಆಯೋಗದ ಆದೇಶ ತಲುಪಿದ ತಕ್ಷಣವೇ ಮೇಲ್ಮನವಿದಾರರಿಗೆ ಮಾಹಿತಿ ನೀಡಿ ಅದರ ಪ್ರತಿ ಮತ್ತು ಸ್ವೀಕೃತಿ ಪತ್ರ ಆಯೋಗಕ್ಕೆ ಸಲ್ಲಿಸಿ ಮುಂದಿನ ವಿಚಾರಣೆಗೆ ಹಾಜರಾಗುವಂತೆ ಪ್ರತಿವಾದಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಅಧಿನಿಯಮ 2005 ರ 18 (3) ರಡಿ ಆದೇಶಿಸಿ, ತಪ್ಪಿದಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005 ರ 20 (2) ರಡಿ ಎಚ್ಚರಿಕೆ ನೀಡಿದೆ. ಹಾಗೂ ಪ್ರತಿವಾದಿಗಳ ಪ್ರಥಮ ಮೇಲ್ಮನವಿ ಪ್ರಾಧಿಕಾರದ ಅಧಿಕಾರಿಗಳು ಈ ಕುರಿತು ಕ್ರಮ ವಹಿಸಲು ಸೂಚನೆ ನೀಡಿ ತಪ್ಪಿದಲ್ಲಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡುವುದಾಗಿ ಎಚ್ಚರಿಕೆ ನೀಡಿದೆ.

ಶಾಸಕರ ಭವನಕ್ಕೆ ಉಪಸಭಾಪತಿ ಡಾ. ಉಮಾಶ್ರೀ ದಿಢೀರ್ ಭೇಟಿ

''ಶಾಸಕರುಗಳಿಗೆ ಯಾವುದೇ ತೊಂದರೆಯಾದಂತೆ ಗಮನಹರಿಸಿ''

ಉದ್ಯಾನವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವಂತೆ ಹೇಳಿದರು. ಸಮೃದ್ಧಿ ಹೋಟೆಲ್ ಗೂ ತೆರಳಿ, ಅಡುಗೆ ಮನೆ, ದಾಸ್ತಾನು ಕೊಠಡಿ ಪರಿಶೀಲಿಸಿದರು. ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಸೌಕರ್ಯಗಳ ಗಮನಹರಿಸಬೇಕು ಉಪಸಭಾಪತಿಗಳು ಹೇಳಿದರು.

ಶಾಸಕರ ಭವನದಲ್ಲಿ ಸಚಿವಾಲಯದ ಸಿಬ್ಬಂದಿ, ವೈದ್ಯಕೀಯ ಘಟಕ ಹಾಗೂ ಭದ್ರತಾ ಸಿಬ್ಬಂದಿ ಸದಾ ಕರ್ತವ್ಯಕ್ಕೆ ಸನ್ನದ್ದರಾಗಿರಬೇಕು ಎಂದು ವೇಳೆ ಉಪಸಭಾಪತಿ ಡಾ. ಉಮಾಶ್ರೀ ಅವರು ಸಂಬಂಧಪಟ್ಟ ಅಧಿಕಾರಿಗಳು ಆದೇಶ ನೀಡಿದರು.

ಈ ವೇಳೆ ಪರಿಷತ್ತಿನ ವಸತಿ ಸಮಿತಿಯ ಸದಸ್ಯ ಬಿ.ಜಿ. ಪಾಟೀಲ್ ಅವರು, ಶಾಸಕರ ಭವನದ ಕ್ಷೇತ್ರಾಧಿಕಾರಿ ಸಿ.ಟಿ. ರೂಪ ಇನ್ನಿತರ ಅಧಿಕಾರಿಗಳು ಹಾಗೂ ನೌಕರರು ಉಪಸ್ಥಿತರಿದ್ದರು.

ಗ್ರಾಮೀಣ ಪ್ರದೇಶದ ಯುವಕರು ತಂತ್ರಜ್ಞಾನದ ಮೂಲಕ ಸುಶಿಕ್ಷಿತರಾಗಿ,ಪ್ರತಿಭೆ ವ್ಯಕ್ತಪಡಿಸಿ - ಡಾ.ಕರಿಗೂಳಿ

ರಿಗೂ ಗೌರವಿಸುವ ಮತ್ತು ಬದುಕುವ ಕಲೆ ಕಲಿಯಲು ಸಾಧ್ಯ ಎಂದು ವಿವರಿಸಿದರು ಕನ್ನಡ ಉಪನ್ಯಾಸಕರಾದ ವಿನಯಕುಮಾರ ರವರು ವಿದ್ಯಾರ್ಥಿಗಳ ಶ್ರೇಯೋಭಿವೃದ್ದಿ ಕುರಿತು ಮಾತನಾಡಿದರು. ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ ಮತ್ತು ಕ್ರೀಡೆ ಗಳಲ್ಲಿ ಸ್ಪರ್ಧೆ ಗಳನ್ನು ಏರ್ಪಡಿಸಿ ಬಹುಮಾನಗಳನ್ನು ನೀಡಲಾಯಿತು. ಬಿಎ,ಬಿಕಾಂನ 5ನೇ ಸೆಮ್ ವಿದ್ಯಾರ್ಥಿನಿಯರಾದ ಹೇಮಾ,ರಕ್ಷಿತಾ,ಅಕ್ಷತಾ,ಲಾವಣ್ಯ, ಚಂದ್ರು,ಶಾಂಭವಿ ,ವೀರೇಶ ಕಾರ್ಯಕ್ರಮ ನಿರೂಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಅಧ್ಯಾಪಕರಾದ ಡಾ.ಶಶಿಕುಮಾರ, ರವಿಕುಮಾರ,

ಡಾ.ವಿರುಪಾಕ್ಷ.ಕೆ,ಶಂಕ್ರಪ್ಪ ಮತ್ತು ಎಲ್ಲಾ ವಿಭಾಗದ ಉಪನ್ಯಾಸಕರು, ಆಡಳಿತ ಸಿಬ್ಬಂದಿ ವಿನಾಯಕ, ಸಹಾಯಕ ಸಿಬ್ಬಂದಿ ಶಾಂತಿ, ಶರಣಬಸವ ಹಾಗೂ ಕಾಲೇಜಿನ ಎಲ್ಲಾ ವಿದ್ಯಾರ್ಥಿ,ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಚುನಾವಣಾ ಆಯೋಗದ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಕಲಬುರಗಿಯಲ್ಲಿ ಕಾಂಗ್ರೆಸ್ ಪ್ರತಿಭಟನೆ



ಕಲಬುರಗಿ,ಅ.09-

ಚುನಾವಣಾ ಆಯೋಗದ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಹಾಗೂ ಕಾಂಗ್ರೆಸ್ ನಾಯಕರ ಮೇಲೆ ನಡೆದಿರುವ ಪೊಲೀಸ್ ಬಲಪ್ರಯೋಗವನ್ನು ಖಂಡಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಕಾಂಗ್ರೆಸ್ ಕಚೇರಿಯಿಂದ ಅನ್ನಪೂರ್ಣ ಕ್ರಾಸ್‌ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರು, ರಸ್ತೆಯಲ್ಲಿಟ ಯರ್‌ಗೆ ಬೆಂಕಿ ಹಚ್ಚಿ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು, ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಆಶಯಗಳನ್ನು ರಕ್ಷಿಸುವಂತೆ ಒತ್ತಾಯಿಸಿದರು.

ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಅವರ ನೇತೃತ್ವದಲ್ಲಿ ಇಂಡಿಯಾ ಮೈತ್ರಿಕೂಟದ ನಾಯಕರು ಚುನಾವಣಾ ಆಯೋಗದ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಶಾಂತಿಯುತವಾಗಿ ಜಂತರ್ ಮಂತರ್‌ಗೆ ತೆರಳುತ್ತಿದ್ದ ಸಂದರ್ಭದಲ್ಲಿ ಅವರನ್ನು ತಡೆದು ಪೊಲೀಸ್ ಬಲಪ್ರಯೋಗ ಮಾಡಿರು ವುದು ಖಂಡನೀಯ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಚುನಾಯಿತ ಪ್ರತಿನಿಧಿಗಳ ಮೇಲೆ ನಡೆದಿರುವ ಈ ರೀತಿಯ ವರ್ತನೆ ಸಂವಿಧಾನ ಹಾಗೂ ಪ್ರಜಾಪ್ರಭುತ್ವದ ಮೇಲಿನ ದಾಳಿ ಎಂದು ಅವರು ಆರೋಪಿಸಿದರು.

ಈ ಸಂದರ್ಭದಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ್, ಕುಡಾ ಅಧ್ಯಕ್ಷ ಮಜರ್ ಖಾನ್ ಅಲಂ, ಕಾಂಗ್ರೆಸ್ ಮುಖಂಡರಾದ ಭೀಮರಾವ್ ಟಿಟಿ, ಮಹಾಂತಪ್ಪ ಸಂಗಾವಿ, ಫಾರೂಕ್ ಮನಿಯಾಲ್, ರಾಜವಿ ಜಾನೆ, ಸಂತೋಷ್ ಪಾಟೀಲ್ ಡನ್ನೂರ್ ಶಕೀಲ್ ಸರಡಗಿ, ಲಿಂಗರಾಜ ತಾರಫೈಲ್, ನಯುಮ್ ಖಾನ್, ಅಶೋಕ್ ವೀರನಾಯಕ್, ಈರಣ್ಣ ಪಾಟೀಲ್ ಜಳಕಿ, ಶಿವಾನಂದ ಹೊನ ಗುಂಟಿ, ದಿನೇಶ್ ದೊಡ್ಡಮನಿ, ಧರ್ಮ ರಾಜ್ ಹೇರೂರ್ ಪರಶು ರಾಮ್ ಟೈಗರ್ ವಿಘ್ನೇಶ್, ಮನೋಹರ್ ಪದ್ದಾರ್ ಫಾರೂಕ್ ಪಟೇಲ್, ಚಂದ್ರಶೇಖರ್ ಹಡಪದ ತೊನಸನಹಳ್ಳಿ, ಅಸ್ಲಾಂ ಸಿಂದಗಿ, ಮಹೇಶ್ ತೇಲ್ಲೂರಕರ್ ಶಿವಾನಂದ ತೋರವಿ, ಮಲ್ಲಿಕಾರ್ಜುನ ನೀಲೂರ್ ಇಜಾಜ್ ಶೇಕ್, ಉಮರ್ ಜುನೈದಿ, ಶಾಹಿನಾಸ್ ಅತ್ತರ್ ಶೇಕ್ ಸಮ್ರಿನ್, ಆಸೀಮ ಪಟೇಲ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು.



ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಖೇಲೋ ಇಂಡಿಯಾ ಕ್ರೀಡಾಪಟುಗಳ ಗಮನಾರ್ಹ ಸಾಧನೆ

ಕಲಬುರಗಿ,ಅ.09-

ಉಪನಿರ್ದೇಶಕರ ಆಡಳಿತ ಕಾರ್ಯಾಲಯ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಖೇಲೋ ಇಂಡಿಯಾ ಕ್ರೀಡಾಪಟುಗಳು ಗಮನಾರ್ಹ ಸಾಧನೆ ಮಾಡಿದ್ದು, ವಿವಿಧ ಅಥ್ಲೆಟಿಕ್ಸ್ ಸ್ಪರ್ಧೆಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಬಾಲಕರ ವಿಭಾಗದಲ್ಲಿ ಶ್ರೀನಿವಾಸ್ 800 ಮೀಟರ್ ಓಟ ಹಾಗೂ 400 ಮೀಟರ್ ಹರ್ಡಲ್ಸ್ ನಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ಪುರವ್ 600 ಮೀಟರ್ ಓಟದಲ್ಲಿ ಪ್ರಥಮ ಹಾಗೂ 400 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಜಗದೀಶ್ 400 ಮೀಟರ್ ಹರ್ಡಲ್ಸ್ ನಲ್ಲಿ ಹಾಗೂ ರಿಯಾಜ್ 110 ಮೀಟರ್ ಹರ್ಡಲ್ಸ್ ನಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಕೈಲಾಸ್ 5 ಕಿ.ಮೀ. ನಡಿಗೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಅರ್ಹತೆ ಪಡೆದಿದ್ದಾರೆ.

4100 ಮೀಟರ್ ರಿಲೇ ಸ್ಪರ್ಧೆಯಲ್ಲಿ ಸಮರ್ಥ್, ಆಕಾಶ್, ಮೇಘರಾಜ್ ಹಾಗೂ ಸಿದ್ಧಾರ್ಥ ಅವರ ತಂಡ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದೆ. ಬಾಲಕಿಯರ ವಿಭಾಗದಲ್ಲಿಯೂ ಖೇಲೋ ಇಂಡಿಯಾ ಕ್ರೀಡಾಪಟುಗಳು ಉತ್ತಮ ಪ್ರದರ್ಶನ ನೀಡಿದ್ದಾರೆ. ವಿದೀಶಾ 600 ಮೀಟರ್ ಹಾಗೂ 400 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ಸೋನಾಕ್ಷಿ 1500 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದರೆ, ಸಾವಿತ್ರ 3 ಕಿ.ಮೀ. ನಡಿಗೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಖೇಲೋ ಇಂಡಿಯಾ ಕ್ರೀಡಾಪಟುಗಳ ಈ ಸಾಧನೆಗೆ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ತರಬೇತುದಾರರು, ಶಿಕ್ಷಕರು ಹಾಗೂ ಪೋಷಕರು ಹರ್ಷ ವ್ಯಕ್ತಪಡಿಸಿದ್ದಾರೆ. ರಾಜ್ಯಮಟ್ಟದ ಕ್ರೀಡಾಕೂಟದಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಜಿಲ್ಲೆಯ ಕೀರ್ತಿ ಹೆಚ್ಚಿಸುವಂತೆ ಕ್ರೀಡಾಪಟುಗಳಿಗೆ ಶುಭ ಹಾರೈಸಿದ್ದಾರೆ.

ಪುಸ್ತಗಳು ಜೀವನ ರೂಪಿಸುವ ಜೀವಂತ ಜ್ಞಾನ ಮಂದಿರಗಳು : ಶಿವರಂಜನ ಸತ್ಯಂಪೇಟೆ



ಕಲಬುರಗಿ,ಅ.09-

ಪುಸ್ತಕಗಳು ನಿರ್ಜೀವ ವಸ್ತುಗಳಲ್ಲ. ಅವು ಜೀವನ ರೂಪಿಸುವ ಜೀವಂತ ದೇಗುಲಗಳಿದ್ದಂತೆ. ಪುಸ್ತಕಗಳಿಂದ ಬದುಕು ಹಸನಾಗಿ, ಸುಂದರವಾಗಿ ಕಂಗೊಳಿಸಬಲ್ಲದು ಎಂದು ಪತ್ರಕರ್ತ-ಸಾಹಿತಿ ಡಾ. ಶಿವರಂಜನ ಸತ್ಯಂಪೇಟೆ ಅಭಿಪ್ರಾಯಪಟ್ಟರು.

ಕನ್ನಡ ಪುಸ್ತಕ ಪ್ರಾಧಿಕಾರದ ಜಿಲ್ಲಾ ಜಾಗೃತಿ ಸಮಿತಿ ವತಿಯಿಂದ ಪ್ರಾಚಾರ್ಯ ಪ್ರೊ. ಇಂದುಮತಿ ದಿವಾಕರ ಅವರ ಮನೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪುಸ್ತಕಗಳು ಜ್ಞಾನದ ಕಿಟಕಿಗಳಿದ್ದಂತೆ. ಪುಸ್ತಕಗಳ ಓದಿನಿಂದ ಮೌಲ್ಯಗಳ ವೃದ್ಧಿಯಾಗಿ ಮನುಕುಲದ ಉಳಿವು ಸಾಧ್ಯ ಎಂದು ತಿಳಿಸಿದರು. ಪುಸ್ತಕಗಳು ಮನಸ್ಸಿನ ಮಲೀನತೆಗೆ ಸಾಣೆ ಹಿಡಿದು, ಮೌಢ್ಯವೆಂಬ ಕತ್ತಲೆಯನ್ನು ಓಡಿಸುವ ಅರಿವಿನ ಬೆಳಕಾಗಿವೆ. ಪುಸ್ತಕಗಳಿಂದ ಮಾನವೀಯ ಸಂಬಂಧಗಳು ಗಟ್ಟಿಗೊಳ್ಳುತ್ತವೆ ಎಂದು ಅವರು ಹೇಳಿದರು.

ಮುಖ್ಯ ಅತಿಥಿಯಾಗಿದ್ದ ದಿವಾಕರ ಎಸ್. ಮಾತನಾಡಿ, ದೇವರು ವಾಸಿಸುವ ಸ್ಥಳವನ್ನು ದೇವಾಲಯ, ಮೃಗಗಳು ವಾಸಿಸುವ ಸ್ಥಳವನ್ನು ಮೃಗಾಲಯ ಎಂದು ಕರೆಯುವಂತೆ ಗ್ರಂಥಗಳಿರುವ ಮನೆಯನ್ನು ಗ್ರಂಥಾಲಯ ಎಂದು ಕರೆಯಲಾಗುತ್ತದೆ ಎಂದರು.

ದೇವಾಲಯಕ್ಕೆ ಹೋಗುವಾಗ ಭಕ್ತಿ, ಆಸೆ ಇರುತ್ತದೆ. ಮೃಗಾಲಯಕ್ಕೆ ಹೋಗುವಾಗ ಭಯ, ಕುತೂಹಲ ಇರುತ್ತದೆ. ಅದೇ ರೀತಿ ಗ್ರಂಥಾಲಯಕ್ಕೆ ಹೋಗುವಾಗ ಜ್ಞಾನ ಪಡೆದುಕೊಳ್ಳುವ ಆಸೆ ಇರಬೇಕು. ಮಾನವನಾಗಿ ಬದುಕಲು ಉತ್ತಮ ಗ್ರಂಥಗಳ ಅಗತ್ಯವಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಾ. ಶ್ರೀಶೈಲ ಮಸೂತೆ, ನೀತಾಸಿಂಗ್, ಲತಾ ಕವಳೆ, ಗೀತಾ ಕುಂಬಾರ, ಡಾ. ಮಹೇಶ ಗಂವ್ಹಾರ, ರೇವಣಸಿದ್ದಪ್ಪ ದುಖಾನ್, ಡಾ. ಲಕ್ಷ್ಮಣ ಕವಳೆ, ಸಂಗಣ್ಣ ಬಿರಾದಾರ ಸೇರಿದಂತೆ ಅನೇಕರಿದ್ದರು. ಪ್ರಾಧಿಕಾರದ ಸದಸ್ಯ ಬಿ.ಎಚ್. ನಿರಗುಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಾಗೃತಿ ಸಮಿತಿ ಸದಸ್ಯ ಡಾ. ನಾಗಪ್ಪ ಗೋಗಿ ಸ್ವಾಗತಿಸಿದರು. ಕಾರ್ಯಕ್ರಮದ ಸಂಚಾಲಕಿ ಡಾ. ಶೋಭಾದೇವಿ ಚಕ್ಕಿ ನಿರೂಪಿಸಿದರು. ಪ್ರೊ. ಇಂದುಮತಿ ವಂದಿಸಿದರು.

ನಾಗಾವಿ ಯಲ್ಲಮ್ಮ ಪಲ್ಲಕ್ಕಿ ಉತ್ಸವ ಯಶಸ್ಸಿಗೆ ಎಲ್ಲರೂ ಕೈಜೋಡಿಸಿ: ನಾಗಯ್ಯ ಹಿರೇಮಠ



ಚಿತ್ತಾಪುರ,ಅ.09-

ಪಟ್ಟಣದ ಐತಿಹಾಸಿಕ ಶ್ರೀ ನಾಗಾವಿ ಯಲ್ಲಮ್ಮ ದೇವಿಯ ಪಲ್ಲಕ್ಕಿ ಉತ್ಸವ ಯಶಸ್ವಿಗೊಳಿಸಲು ಅಧಿಕಾರಿಗಳೊಂದಿಗೆ ತಾಲೂಕಿನ ಎಲ್ಲ ಸಮಾಜದ ಮುಖಂಡರು, ಭಕ್ತಾಧಿಗಳು ಹಾಗೂ ಸಾರ್ವಜನಿಕರು ಕೈಜೋಡಿಸಬೇಕು ಎಂದು ದೇವಸ್ಥಾನ ಸಮಿತಿ ಅಧ್ಯಕ್ಷ ಹಾಗೂ ತಹಶೀಲ್ದಾರ್ ನಾಗಯ್ಯ ಹಿರೇಮಠ ಕರೆ ನೀಡಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಾಗಾವಿ ಯಲ್ಲಮ್ಮ ಪಲ್ಲಕ್ಕಿ ಉತ್ಸವ (ಜಾತ್ರಾ ಮಹೋತ್ಸವ)ದ ಪ್ರಯುಕ್ತ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ''ನಾನು ಕೇವಲ ಅಧಿಕಾರಿಯಲ್ಲ, ಒಬ್ಬ ದೇವಿಯ ಭಕ್ತ. ಭಕ್ತಾಧಿಗಳಿಗೆ ಯಾವುದೇ ತೊಂದರೆಯಾಗದಂತೆ ಎಲ್ಲ ರೀತಿಯ ಪೂರ್ವಸಿದ್ಧತೆಗಳನ್ನು ಕೈಗೊಳ್ಳಲಾಗುವುದು'' ಎಂದು ಹೇಳಿದರು.

ಪಲ್ಲಕ್ಕಿ ಉತ್ಸವಕ್ಕೆ ರಾಜ್ಯ ಸೇರಿದಂತೆ ಹೊರರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸುವ ಹಿನ್ನೆಲೆಯಲ್ಲಿ ಟ್ರಾಫಿಕ್ ಸಮಸ್ಯೆ ಉಂಟಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಿ ಭಕ್ತಾಧಿಗಳಿಗೆ ತೊಂದರೆಯಾಗದಂತೆ ಸುಗಮ ಸಂಚಾರಕ್ಕೆ ವ್ಯವಸ್ಥೆ ಮಾಡಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ದೇವಸ್ಥಾನಕ್ಕೆ ತೆರಳುವ ರಸ್ತೆಯ ಎರಡೂ ಬದಿಯಲ್ಲಿರುವ ಗಿಡಗಂಟಿಗಳನ್ನು ತೆರವುಗೊಳಿಸಿ ಸ್ವಚ್ಛತೆ ಕಾಪಾಡಬೇಕು. ಕುಡಿಯುವ ನೀರು ಹಾಗೂ ಮೊಬೈಲ್ ಟಾಯ್ಲೆಟ್ ವ್ಯವಸ್ಥೆ ಕಲ್ಪಿಸಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಭಾರತಿ ದಂಡೋತಿ ಅವರಿಗೆ ಸೂಚಿಸಿದರು. ವಿದ್ಯುತ್ ವ್ಯವಸ್ಥೆ ಕಲ್ಪಿಸಿ ಬೆಳಕಿನ ವ್ಯವಸ್ಥೆ ಮಾಡಬೇಕು ಎಂದು ಜೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು. ಹದಗೆಟ್ಟಿರುವ ರಸ್ತೆಯನ್ನು ದುರಸ್ತಿ ಮಾಡಬೇಕು ಎಂದು ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಾತ್ರೆಯ ಸಂದರ್ಭದಲ್ಲಿ ಯಾವುದೇ ರೀತಿಯ ಬೆಂಕಿ ಅನಾಹುತ ಸಂಭವಿಸದಂತೆ ಅಗ್ನಿಶಾಮಕ ಇಲಾಖೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು.

ಜಾತ್ರೆಗೆ ಆಗಮಿಸುವ ಭಕ್ತಾಧಿಗಳ ಅನುಕೂಲಕ್ಕಾಗಿ ವಿಶೇಷ ಸಾರಿಗೆ ಬಸ್‌ಗಳ ವ್ಯವಸ್ಥೆ ಮಾಡಬೇಕು ಎಂದು ಬಸ್ ಘಟಕ ವ್ಯವಸ್ಥಾಪಕರಿಗೆ ತಿಳಿಸಿದರು. ಅಕ್ರಮ ಮದ್ಯ ಮಾರಾಟ ನಡೆಯದಂತೆ ಅಬಕಾರಿ ಇಲಾಖೆ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು.

ಭೀಮಣ್ಣ ಕರದಳ್ಳಿ, ಮಲ್ಲರೆಡ್ಡಿ ಗೋಪಸೇನ್ ಹಾಗೂ ಈರಪ್ಪ ಭೋವಿ ಮಾತನಾಡಿ, ನಾಗಾವಿ ಯಲ್ಲಮ್ಮ ದೇವಸ್ಥಾನಕ್ಕೆ ತೆರಳುವ ರಸ್ತೆಯಲ್ಲಿ ಟಿಪ್ಪರ್‌ಗಳ ಸಂಚಾರದಿಂದ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಇದರಿಂದ ಭಕ್ತಾಧಿಗಳಿಗೆ ತೀವ್ರ ತೊಂದರೆಯಾಗುತ್ತಿದೆ. ಹೀಗಾಗಿ ಕೂಡಲೇ ರಸ್ತೆ ದುರಸ್ತಿ ಮಾಡಬೇಕು. ವಿದ್ಯುತ್ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ ರಸ್ತೆ ಬದಿಯ ಗಿಡಗಂಟಿಗಳನ್ನು ತೆರವುಗೊಳಿಸಿ ಸ್ವಚ್ಛತೆ ಕಾಪಾಡಬೇಕು ಎಂದು ಆಗ್ರಹಿಸಿದರು.

ಪುರಸಭೆ ಮುಖ್ಯಾಧಿಕಾರಿ ಭಾರತಿ ದಂಡೋತಿ ಮಾತನಾಡಿ, ಪುರಸಭೆಗೆ ವಹಿಸಿರುವ ಎಲ್ಲ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಲಾಗುವುದು ಎಂದರು. ಸಿಪಿಐ ಎಸ್.ಸಿ. ಪಾಟೀಲ ಹಾಗೂ ಪಿಎಸ್ಐ ಮಂಜುನಾಥ ರೆಡ್ಡಿ ಮಾತನಾಡಿ, ಟ್ರಾಫಿಕ್ ಸಮಸ್ಯೆ ಉಂಟಾಗದಂತೆ ಎಲ್ಲ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ರತ್ನಾಕರ ನಾಯಕ ಮಾತನಾಡಿ, ನಾಗಾವಿ ಯಲ್ಲಮ್ಮ ಪಲ್ಲಕ್ಕಿ ಉತ್ಸವಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ.

ಹೀಗಾಗಿ ಎಲ್ಲರೂ ಸಹಕರಿಸಿ ಉತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಜಾತ್ರೆಯ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಮುಖಂಡರಾದ ಚಂದ್ರಶೇಖರ್ ಅವಂಟಿ, ವಿಠಲ್ ಕಟ್ಟಿಮನಿ, ನರಸಪ್ಪ ಭೋವಿ, ಶರಣಪ್ಪ ಕೋರವಾರ, ಅಂಬಾದಾಸ್ ತುರೆ, ಭಾಸ್ಕರ್ ಪುಣೆ, ಶರಣಪ್ಪ ನಾಟೀಕಾರ ಹಾಗೂ ಸುರೇಶ್ ಬೆನಕನಳ್ಳಿ ಮಾತನಾಡಿದರು.

ಈ ಸಂದರ್ಭದಲ್ಲಿ ಭೀಮಣ್ಣ ಸಾಲಿ, ನಾಗರೆಡ್ಡಿ ಗೋಪಸೇನ್, ನಾಗರಾಜ ಭಂಕಲಗಿ, ಮಲ್ಲಿಕಾರ್ಜುನ ಬೊಮ್ಮನಳ್ಳಿ, ಸುರೇಶ್ ಅಳ್ಳೊಳ್ಳಿ, ಲಕ್ಷ್ಮೀಕಾಂತ್ ತಾಂಡೂರಕರ್ ಶಿವಾಜಿ ಕಾಶಿ, ರಾಮಲಿಂಗ ಬಾನರ್ ಶಿವಕಾಂತ್ ಬೆಣ್ಣೂರಕರ್ ಸಾಬಣ್ಣ ಹೊಳಿಕಟ್ಟಿ, ಭೀಮರಾಯ ಹೊತಿನಮಡಿ, ಶ್ರೀನಿವಾಸ ಪಾಸ್ಮೆ, ಮಹೇಶ್ ಕಾಶಿ, ರಾಮು ಹರವಾಳ, ನಾಗೇಂದ್ರ ಬುರ್ಲಿ, ಸಂಜಯ್ ಬುಳಕರ್ ಬಸವರಾಜ ಮುಡಬೂಳಕರ್ ಸೇರಿದಂತೆ ಸಿಬ್ಬಂದಿಗಳಾದ ಅಶ್ವತ್ಥ ನಾರಾಯಣ, ಮೈನೋದ್ದಿನ್, ಮಂಜುನಾಥ, ಮಾರ್ಥಂಡ ಮುಡಬೂಳ ಹಾಗೂ ಶಂಕರ್ ಸೇರಿದಂತೆ ಇತರರು ಇದ್ದರು.

ಸಂಗಮೇಶ ನಿರೂಪಿಸಿದರು. ಗ್ರೇಡ್-2 ತಹಶೀಲ್ದಾರ್ ರಾಜಕುಮಾರ್ ಮರತೂರಕರ್ ವಂದಿಸಿದರು.

ಕಾಮಗಾರಿ ಗುಣಮಟ್ಟದಲ್ಲಿ ರಾಜಿ ಬೇಡ



ಜೇವರ್ಗಿ,ಅ.08-

ಜೇವರ್ಗಿ ತಾಲೂಕಿನ ಹರವಾಳ ಗ್ರಾಮದ ಸಮೀಪ ಭೀಮಾ ನದಿಗೆ ಅಡ್ಡಲಾಗಿ ಸುಮಾರು 130 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಸೇತುವೆ-ಬಾಂದಾರ ಯೋಜನೆಯ ಕಾಮಗಾರಿಯನ್ನು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಅಜಯ್ ಧರ್ಮಸಿಂಗ್ ಗುರುವಾರ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಕಾಮಗಾರಿಯ ಪ್ರಗತಿ, ತಾಂತ್ರಿಕ ಅಂಶಗಳು ಹಾಗೂ ಬಾಕಿ ಇರುವ ಕೆಲಸಗಳ ಕುರಿತು ಅಧಿಕಾರಿಗಳಿಂದ ಸಚಿವರು ಮಾಹಿತಿ ಪಡೆದುಕೊಂಡರು. ಕಾಮಗಾರಿಯಲ್ಲಿ ಯಾವುದೇ ರೀತಿಯ ಗುಣಮಟ್ಟದ ರಾಜಿ ಮಾಡಿಕೊಳ್ಳದೆ, ನಿಗದಿತ ಅವಧಿಯೊಳಗೆ ಯೋಜನೆಯನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸುಮಾರು 368.60 ಮೀಟರ್ ಉದ್ದ ಹಾಗೂ 4 ಮೀಟರ್ ಎತ್ತರ ಹೊಂದಿರುವ ಸೇತುವೆ-ಬಾಂದಾರ ನಿರ್ಮಾಣವಾಗುತ್ತಿದ್ದು, ಯೋಜನೆ ಪೂರ್ಣಗೊಂಡ ಬಳಿಕ ಭೀಮಾ ನದಿಯ ನೀರು ಸಂಗ್ರಹಣಾ ಸಾಮರ್ಥ್ಯ ಹೆಚ್ಚಲಿದೆ. ಇದರಿಂದ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರಿನ ಲಭ್ಯತೆ ಸುಧಾರಿಸುವುದರ ಜೊತೆಗೆ ಹರವಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಂಪರ್ಕ ವ್ಯವಸ್ಥೆಯೂ ಮತ್ತಷ್ಟು ಬಲಪಡಲಿದೆ.

ನೀರಾವರಿ ಯೋಜನೆಗಳು ಕೇವಲ ನೀರು ಸಂಗ್ರಹಿಸುವ ಕಾಮಗಾರಿಗಳಾಗದೆ, ರೈತರ ಕೃಷಿ ಚಟುವಟಿಕೆ, ಗ್ರಾಮೀಣ ಸಂಪರ್ಕ ಹಾಗೂ ಸ್ಥಳೀಯ ಆರ್ಥಿಕ ಚಟುವಟಿಕೆಗಳಿಗೆ ಅನುಕೂಲವಾಗಬೇಕು. ಹರವಾಳ ಸೇತುವೆ-ಬಾಂದಾರ ಯೋಜನೆ ಯಿಂದ ಈ ಭಾಗದ ರೈತರು ಹಾಗೂ ಗ್ರಾಮಸ್ಥರಿಗೆ ದೀರ್ಘಕಾಲಿಕ ಪ್ರಯೋಜನ ದೊರೆಯಲಿದೆ ಎಂದು ಸಚಿವ ಡಾ. ಅಜಯ್ ಧರ್ಮಸಿಂಗ್ ಹೇಳಿದರು.

ಜೇವರ್ಗಿ ಹಾಗೂ ಅಫಜಲಪುರ ಭಾಗಗಳಲ್ಲಿ ನೀರಾವರಿ, ಸಂಪರ್ಕ ವ್ಯವಸ್ಥೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡುತ್ತಿದೆ. ಜನರ ಅಗತ್ಯಗಳನ್ನು ಅರಿತು, ದೀರ್ಘಕಾಲಿಕ ಹಾಗೂ ಶಾಶ್ವತ ಪರಿಹಾರ ಕಲ್ಪಿಸುವ ಅಭಿವೃದ್ಧಿ ಯೋಜನೆಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲಾಗುವುದು ಎಂದು ಅವರು ತಿಳಿಸಿದರು. ಕಾಮಗಾರಿ ಪರಿಶೀಲನೆ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮೈಸೂರು ದಸರಾ ಪರಂಪರೆ, ಇತಿಹಾಸ ಮತ್ತು ವೈಭವ

ದಸರೆಯ ಮಹತ್ವ

ಭಾರತೀಯ ಹಬ್ಬಗಳು ಪೌರಾಣಿಕ ಹಾಗೂ ಐತಿಹಾಸಿಕ ಹಿನ್ನೆಲೆಯೊಂದಿಗೆ ಮಾನವೀಯ ಮೌಲ್ಯಗಳು ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಪ್ರಮುಖ ಮಾಧ್ಯಮಗಳಾಗಿವೆ. ಇಂದಿನ ಯುವ ಪೀಳಿಗೆಗೆ ಇದರ ಪರಿಚಯವನ್ನು ಮಾಡುವುದು ಅತೀ ಅಗತ್ಯ ಹಾಗೂ ಭಾರತೀಯರಿಗೆ ನಮ್ಮ ದೇಶದ ಸಾಂಸ್ಕೃತಿಕ ಶ್ರೀಮಂತಿಕೆ ಬಗ್ಗೆ ಹೆಮ್ಮೆಯನ್ನು ಹೊಂದುವಂತಹ ಒಂದು ಸುರ್ಣಾವಕಾಶವಾಗಿದೆ.



''ನಾಡಹಬ್ಬ ದಸರಾ'' ಭಾರತದ ಪ್ರಮುಖ ಪಾರಂಪರಿಕ ಹಬ್ಬಗಳಲ್ಲಿ ಒಂದಾಗಿದೆ. ನವರಾತ್ರಿ ಮತ್ತು ವಿಜಯದಶಮಿಯನ್ನು ಒಳಗೊಂಡ ಹತ್ತು ದಿನಗಳ ಈ ಉತ್ಸವವು ಪೌರಾಣಿಕ, ಧರ್ಮಿಕ ಐತಿಹಾಸಿಕ, ಹಾಗೂ ಸಾಂಸ್ಕೃತಿಕ ಮಹತ್ವವನ್ನು ಹೊಂದಿದೆ. ಮಾತ್ರವಲ್ಲ, ಅಂತರಾಷ್ಟ್ರೀಯ ಮಟ್ಟದಲ್ಲಿ ''ಮೈಸೂರು ದಸರಾ'' ಆಚರಣೆಯ ವೈಶಿಷ್ಟ್ಯವನ್ನು ಗಮನಿಸಿ, 2008ರಲ್ಲಿ ಯುನೆಸ್ಕೋ ದಸರಾ ಆಚರಣೆಯ ಕಲಾಪ್ರಕಾರಗಳನ್ನು ಮಾನವೀಯತೆಯ ಅಮೂರ್ತ ಸಾಂಸ್ಕೃತಿಕ ಪರಂಪರೆ ಎಂದು ಗುರುತಿಸಿದೆ.

ಪ್ರಾಚೀನ ಕಾಲದ ದಸರಾ ವೈಭವ

ಶ'ರ'ದ್ೃತ'ುವಿನ'ಲ್ಲಿ ಆಚ'ರಿಸ'ಲಾಗ'ುವ' ನವರಾತ್ರಿಯು ದೇವಿಯ ವಿವಿಧ ರೂಪಗಳ ಆರಾಧನೆಗೆ ಸ'ರ್ಮಿ'ತ'ವಾಗಿದ'್ದ್, ವಿಜಯುದ'ಶ'ಮಿಯುನ'್ನು ವಿಜಯದ ಸಂಕೇತವಾಗಿ ಆಚರಿಸಲಾಗುತ್ತದೆ.ದುಷ್ಟಶಕ್ತಿಯ ಮೇಲೆ ಸತ್ಕರ್ಯ ಮತ್ತು ರ್ಮದ ವಿಜಯವೇ ಇದರ ಪ್ರಮುಖ ಸಂದೇಶ. ದೇಶದ ವಿವಿಧ ಭಾಗಗಳಲ್ಲಿ ವಿಭಿನ್ನ ರೀತಿಯಲ್ಲಿ ದ'ಸ'ರಾ ಆಚರಿಸಲಾಗುತ್ತಿದ್ದರೂ, ಮೈಸೂರು ದಸರಾ ತನ್ನ ವಿಶಿಷ್ಟ ಪರಂಪರೆ, ರಾಜವೈಭವ ಮತ್ತು ಸಾಂಸ್ಕೃತಿಕ ಆಚರಣೆಗಳಿಂದ ವಿಶ್ವಪ್ರಸಿದ್ಧವಾಗಿದೆ.



ನವರಾತ್ರಿ ಮತ್ತು ದೇವಿ ಆರಾಧನೆ

ಪುರಾಣಗಳಲ್ಲಿ ಮಹಿಷಾಸುರನಂತಹ ಅಸುರ ಶಕ್ತಿಗಳ ವಿರುದ್ಧ ಚಾಮುಂಡೇಶ್ವರಿ ದೇವಿಯ ವಿಜಯದ ಕಥೆಗಳು ನವರಾತ್ರಿ ಆಚರಣೆಯೊಂದಿಗೆ ಸಂಬಂಧ ಹೊಂದಿವೆ. ಅಸುರರ ಸಂಹಾರದ ಮೂಲಕ ರ್ಮ ಮತ್ತು ಸತ್ಯದ ವಿಜಯವನ್ನು ಸಂಭ್ರಮಿಸಲಾಗುತ್ತದೆ. ಮೈಸೂರು ದಸರೆಯಲ್ಲಿ ಚಾಮುಂಡೇಶ್ವರಿ ದೇವಿಯ ಆರಾಧನೆಗೆ ವಿಶೇಷ ಸ್ಥಾನವಿದೆ.

ಪ್ರಕೃತಿಯನ್ನು ಮಾತೃಸ್ವರೂಪವಾಗಿ ಕಾಣುವ ಭಾರತೀಯ ಪರಂಪರೆಯಲ್ಲಿ ಶಕ್ತಿಯನ್ನು ಶೈಲಪುತ್ರೀ, ಬ್ರಹ್ಮಚಾರಿಣೀ, ಚಂದ್ರಘಂಟಾ, ಕೂಷ್ಮಾಂಡಾ, ಸ್ಕಂದಮಾತಾ, ಕಾತ್ಯಾಯನೀ, ಕಾಲರಾತ್ರಿ, ಮಹಾಗೌರಿ ಮತ್ತು ಸಿದ್ಧಿಧಾತ್ರಿ ಎಂಬ ನವರೂಪಗಳಲ್ಲಿ ಆರಾಧಿಸಲಾಗುತ್ತದೆ.

ಘಟಸ್ಥಾಪನೆ, ದೇವಿ ಪೂಜೆ, ಸರಸ್ವತಿ ಪೂಜೆ, ದರ್ಗಾಷ್ಟಮಿ, ಆಯುಧ ಪೂಜೆ ಹಾಗೂ ಇತರ ಧರ್ಮಿಕ ವಿಧಿವಿಧಾನಗಳು ಈ ಅವಧಿಯಲ್ಲಿ ನಡೆಯುತ್ತವೆ. ಹತ್ತನೆಯ ದಿನವಾದ ವಿಜಯದಶಮಿಯು ವಿಜಯಲಕ್ಷ್ಮಿ ಅಥವಾ ಅಪರಾಜಿತಾ ದೇವಿಯ ಆರಾಧನೆಯನ್ನು ನಡೆಸಲಾಗುತ್ತದೆ. ನವರಾತ್ರಿಯ ಒಂಭತ್ತು ದಿನಗಳು ದೇವಿಯ ಒಂಭತ್ತು ವಿವಿಧ ಬಣ್ಣಗಳನ್ನು ಸಂಕೇತಿಸುತ್ತವೆ. ದಿನ-1 ಕಿತ್ತಳೆ, ದಿನ-2 ಬಿಳಿ, ದಿನ-3 ಕೆಂಪು, ದಿನ-4 ಕಡುನೀಲಿ, ದಿನ-5 ಹಳದಿ, ದಿನ-6 ಹಸಿರು, ದಿನ-7 ಬೂದು, ದಿನ-8 ನೇರಳೆ, ದಿನ-9 ನವಿಲು ಹಸಿರು ಬಣ್ಣಗಳಿಂದ ದೇವಿಯನ್ನು ಅಲಂಕರಿಸಲಾಗುತ್ತದೆ. ಅಲ್ಲದೇ, ಹೆಣ್ಣುಮಕ್ಕಳೂ ಸಹ ನವರಾತ್ರಿಯ ಪ್ರತಿದಿನವೂ ಅದೇ ಬಣ್ಣದ ಉಡುಪುಗಳನ್ನು ಧರಿಸಿ ಸಂಭ್ರಮಿಸುತ್ತಾರೆ.

ವಿಜಯದಶಮಿಗೆ ರಾಮಾಯಣದ ಹಿನ್ನೆಲೆಯೂ ಇದೆ. ಶ್ರೀರಾಮನು ರಾವಣನನ್ನು ಸಂಹರಿಸಿದ ದಿನವೆಂದು ಇದನ್ನು ಆಚರಿಸುವ ಸಂಪ್ರದಾಯವಿದೆ. ಹೀಗಾಗಿ ದಸರಾ ದೇವಿಯ ವಿಜಯ ಮತ್ತು ಶ್ರೀರಾಮನ ವಿಜಯ ಎರಡನ್ನೂ ಪ್ರತಿನಿಧಿಸುವ ಮಹತ್ವದ ಹಬ್ಬವಾಗಿದೆ.

ಐತಿಹಾಸಿಕ ಹಿನ್ನೆಲೆ

ಮೈಸೂರು ದಸರೆಯ ಇತಿಹಾಸ ಅತ್ಯಂತ ಪ್ರಾಚೀನವಾಗಿದೆ. ಭಾರತದ ವಿವಿಧ ರಾಜವಂಶಗಳ ಕಾಲದಲ್ಲಿಯೇ ದರ್ಗಾ ಮತ್ತು ಮಹಿಷರ್ದಿನಿಯ ಆರಾಧನೆಯ ಶಿಲ್ಪಗಳು ಕಂಡುಬರುವುದರಿಂದ ದಸರಾ ಆಚರಣೆಯು ಪ್ರಾಚೀನ ಕಾಲದಿಂದಲೂ ನಡೆದುಕೊಂಡು ಬಂದಿರುವುದಾಗಿ ಪರಿಗಣಿಸಲಾಗಿದೆ.ಶ್ರೀರಂಗಪಟ್ಟಣದ ಪತನದ ನಂತರ ಮೈಸೂರನ್ನು ರಾಜಧಾನಿಯನ್ನಾಗಿ ಮಾಡಿಕೊಂಡ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರು 1799ರಲ್ಲಿ ಮೈಸೂರಿನಲ್ಲಿ ದಸರಾ ಉತ್ಸವಕ್ಕೆ ಮರುಚಾಲನೆ ನೀಡಿದರು.

ವಿಜಯನಗರ ಸಾಮ್ರಾಜ್ಯದ ಕಾಲದಲ್ಲಿ ದಸರಾ ಉತ್ಸವವು ಅತ್ಯಂತ ವೈಭವದಿಂದ ನಡೆಯುತ್ತಿತ್ತು. ಇಂದಿನ ಮೈಸೂರು ದಸರಾ ವಿಜಯನಗರದ ಈ ಪರಂಪರೆಯ ಮುಂದುವರಿದ ರೂಪವಾಗಿದೆ.

ಮೈಸೂರು ಒಡೆಯರ ಕಾಲದ ದಸರಾ ವೈಭವ

ಮೈಸೂರು ಅರಸರಾದ ಶ್ರೀ ರಾಜ ಒಡೆಯರ್ ಅವರು ಸಾ.ಶ. 1610ರಲ್ಲಿ ಶ್ರೀರಂಗಪಟ್ಟಣದಲ್ಲಿ ಹತ್ತು ದಿನಗಳ ದಸರಾ ಉತ್ಸವವನ್ನು ಆರಂಭಿಸಿದರು. ನಂತರ ಮೈಸೂರು ಒಡೆಯರ ಆಡಳಿತದಲ್ಲಿ ದಸರಾ ಉತ್ಸವವು ರಾಜವೈಭವದ ಪ್ರಮುಖ ಸಂಕೇತವಾಗಿ ಬೆಳೆಯಿತು.1648 ರಲ್ಲಿ ರಣಧೀರ ಕಂಠೀರವ ನರಸರಾಜ ಒಡೆಯರ್ ಅವರ ಕಾಲದ ದಸರಾ ಆಚರಣೆಗಳ ವಿವರಗಳನ್ನು ಕವಿ ಗೋವಿಂದವೈದ್ಯರು ತಮ್ಮ ಕಂಠೀರವ ನರಸರಾಜ ವಿಜಯ ಕೃತಿಯಲ್ಲಿ ದಾಖಲಿಸಿದ್ದಾರೆ. ಆ ಕಾಲದಲ್ಲಿ ದೇವಿ ಆರಾಧನೆ, ಆಯುಧ ಪೂಜೆ, ರಾಜರ್ಬಾ್ರ್ ಮಲ್ಲಯುದ್ಧ, ನೃತ್ಯ, ಸಂಗೀತ ಹಾಗೂ ವಿವಿಧ ಸಾಂಸ್ಕೃತಿಕ ಕರ್ಯಕ್ರಮಗಳು ದಸರೆಯ ಪ್ರಮುಖ ಭಾಗವಾಗಿದ್ದವು.

ಕಂಠೀರವನರಸರಾಜಒಡೆಯರ್

ಮೈಸೂರು ಒಡೆಯರ ಕಾಲದಲ್ಲಿ ದಸರಾ ರಾಜಮನೆತನದ ಪ್ರಮುಖ ಉತ್ಸವವಾಗಿತ್ತು. ನವರಾತ್ರಿಯ ಸಂರ್ಭದಲ್ಲಿ ರಾಜರು ಕುಲದೇವತೆ ಹಾಗೂ ಇತರ ದೇವತೆಗಳನ್ನು ಪೂಜಿಸಿ, ಪಟ್ಟದ ಆನೆ ಮತ್ತು ಕುದುರೆಗಳಿಗೆ ಪೂಜೆ ಸಲ್ಲಿಸುತ್ತಿದ್ದರು. ರಾಜರ್ಬಾ್ರ್ ಆಯುಧ ಪೂಜೆ ಮತ್ತು ವಿಜಯದಶಮಿ ಮೆರವಣಿಗೆಗಳು ಪ್ರಮುಖ ಕರ್ಯಕ್ರಮಗಳಾಗಿದ್ದವು.

ಚತುರಂಗಬಲಆಯುಧಪೂಜೆಗೆ (32 ಆಯುಧಗಳಪೂಜೆ) ಅಣಿಗೊಂಡಆಯುಧಗಳು

ಮಹಾನವಮಿಯಂದು ಪಟ್ಟದ ಕತ್ತಿ ಸೇರಿದಂತೆ ರಾಜವಂಶದ ಆಯುಧಗಳನ್ನು ವಿಶೇಷವಾಗಿ ಪೂಜಿಸಲಾಗುತ್ತದೆ.ಹಿಂದಿನ ಕಾಲದಲ್ಲಿ ರಾಜರ್ಬಾ್ರ್ ಮಲ್ಲಯುದ್ಧ, ಸಂಗೀತ, ನೃತ್ಯ, ಬಾಣಬಿರುಸು ಮತ್ತು ವಿವಿಧ ರಾಜಕೀಯ ಹಾಗೂ ಸಾಂಸ್ಕೃತಿಕ ಪ್ರರ್ಶನಗಳು ದಸರೆಯ ಭಾಗವಾಗಿದ್ದವು. ಕಾಲ ಬದಲಾದಂತೆ ಅವುಗಳಲ್ಲಿ ಹಲವು ರೂಪಾಂತರಗೊಂಡಿದ್ದರೂ, ದಸರೆಯ ಮೂಲ ಪರಂಪರೆ ಇಂದಿಗೂ ಮುಂದುವರಿದಿದೆ.

ಅರಮನೆಯ ಒಳಭಾಗದಲ್ಲಿ ನಡೆಯುವ ಕೌತುಕಭರಿತ ಮಲ್ಲಯುದ್ದದ ಚಿತ್ರ

ಮುಮ್ಮಡಿಕೃಷ್ಣರಾಜಒಡೆಯರ್

ಮುಮ್ಮಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ದಸರಾ ಆಚರಣೆ ವಿಶೇಷ ವೈಭವವನ್ನು ಪಡೆದಿತ್ತು. ಮಹಾನವಮಿಯಂದು ಕತ್ತಿ, ಖಡ್ಗ ಸೇರಿದಂತೆ ರಾಜವಂಶದ ವಿವಿಧ ಆಯುಧಗಳಿಗೆ ಪೂಜೆ ಸಲ್ಲಿಸಲಾಗುತ್ತಿತ್ತು. ವಿಜಯದಶಮಿಯಂದು ರಾಜರು ರಾಜಪೋಷಾಕಿನಲ್ಲಿ ಖಡ್ಗ ಹಿಡಿದು ಮೆರವಣಿಗೆಯಲ್ಲಿ ಭಾಗವಹಿಸುತ್ತಿದ್ದರು. ಆ ಕಾಲದಲ್ಲಿ ಇಂದಿನಂತೆ ಚಿನ್ನದ ಅಂಬಾರಿಯಲ್ಲಿ ರಾಜರು ಸಂಚರಿಸುತ್ತಿರಲಿಲ್ಲ. ಆನೆಗಳು ಎಳೆಯುವ ಬೆಳ್ಳಿಯ ರಥದಲ್ಲಿ ಮಹಾರಾಜರು ಕುಳಿತು ಮೆರವಣಿಗೆಯಲ್ಲಿ ಸಾಗುತ್ತಿದ್ದರು. ನಂತರ ಕುದುರೆಯೇರಿ ಸೈನ್ಯ ವೀಕ್ಷಿಸಿ, ಬನ್ನಿಮರಕ್ಕೆ ಪೂಜೆ ಸಲ್ಲಿಸುವ ಸಂಪ್ರದಾಯವೂ ಇತ್ತು.

ಚಾಮುಂಡಿ ಬೆಟ್ಟದ ವಿಶೇಷತೆ

ಮೈಸೂರು ದಸರೆಯ ಧರ್ಮಿಕ ಹಿನ್ನೆಲೆಯ ಪ್ರಮುಖ ಕೇಂದ್ರ ಚಾಮುಂಡಿ ಬೆಟ್ಟ. ನವರಾತ್ರಿಯ ಸಂರ್ಭದಲ್ಲಿ ಚಾಮುಂಡೇಶ್ವರಿ ದೇವಿಗೆ ಪ್ರತಿದಿನ ವಿಶೇಷ ಅಲಂಕಾರ ಮತ್ತು ಪೂಜೆಗಳನ್ನು ನೆರವೇರಿಸಲಾಗುತ್ತದೆ.

ದೇವಿಯನ್ನು ವಿವಿಧ ಶಕ್ತಿರೂಪಗಳಲ್ಲಿ ಅಲಂಕರಿಸುವ ಸಂಪ್ರದಾಯವಿದೆ. ನವರಾತ್ರಿಯ ಹತ್ತು ದಿನಗಳ ಅವಧಿಯಲ್ಲಿ ದೇವಿಯ ವಿವಿಧ ಅಲಂಕಾರಗಳು ಭಕ್ತರನ್ನು ಆರ್ಕಿಸುತ್ತವೆ. ವಿಜಯದಶಮಿಯಂದು ದೇವಿಯನ್ನು ಅಪರಾಜಿತೆಯ ರೂಪದಲ್ಲಿ ಆರಾಧಿಸಲಾಗುತ್ತದೆ.

ನವರಾತ್ರಿಯ ಮತ್ತೊಂದು ವಿಶೇಷ ಆಚರಣೆ ಕುಮಾರಿ ಪೂಜೆ. 2-10 ವಯಸ್ಸಿನ ಬಾಲಕಿಯರನ್ನು ದೇವಿಯ ವಿವಿಧ ರೂಪಗಳ ಪ್ರತೀಕವಾಗಿ ಪೂಜಿಸುವ ಸಂಪ್ರದಾಯವೂ ಕೆಲವು ಕಡೆಗಳಲ್ಲಿ ಕಂಡುಬರುತ್ತದೆ.

ಅರಮನೆಯ ಪ್ರಮುಖ ಆರ್ಷಣೆ ಸಿಂಹಾಸನ

ಆರ್ಷಣೆ ಮೈಸೂರು ಸಂಸ್ಥಾನದಲ್ಲಿ ಮತ್ತೊಂದು ಪ್ರಮುಖ ಸಿಂಹಾಸನವಾಗಿದೆಇದುರತ್ನ ಖಚಿತಚಿನ್ನದಸಿಂಹಾಸನವಾಗಿದ್ದು, ದಸರಾಗೂಮೊದಲುಒಂದುಶುಭಮುಹೂರ್ತದಲ್ಲಿಖಾಸಗಿರ್ಬಾರಿನಲ್ಲಿಜೋಡಣೆಮಾಡಲಾಗುತ್ತದೆ. ದಸರಾಸಂರ್ಭಗಳಲ್ಲಿಮಾತ್ರಸುಮಾರು 30 ರಿಂದ 40 ದಿನಗಳಕಾಲ ಸರ್ವಜನಿಕರುವೀಕ್ಷಣೆಮಾಡಬಹುದಾಗಿದೆ. ಸಿಂಹಾಸನವು ಹಲವು ವೈಶಿಷ್ಟ್ಯಗಳಿಂದ ಕೂಡಿದ್ದು ಬೆಳ್ಳಿಯಮೆಟ್ಟಲು ಹೊಂದಿದ್ದುಎರಡು ಬದಿಯಲ್ಲಿರ್ವಣಾಸುಂದರಿಯರುಇದ್ದು, ಮಹಾರಾಜರಿಗೆಸ್ವಾಗತ ಮಾಡುವಭಂಗಿಯಲ್ಲಿ ನಿಂತಿರುವಹಾಗೆರೂಪಿಸಲಾಗಿದೆ. ಇನ್ನುಇದರಮೇಲ್ಬಾಗದಲ್ಲಿ ಚಿನ್ನದಛಾಮರ ಹೊಂದಿದ್ದುಅದಕ್ಕೆಮಯೂರಪಕ್ಷಿಯನ್ನುಜೋಡಿಸಲಾಗಿದೆ. ಸುತ್ತಲು ಮುತ್ತುಗಳಿಂದಅಲಂಕೃತವಾಗಿದೆ. ಇನ್ನುಸಿಂಹಾಸನದಹಿಂಭಾಗದ ಮೇಲ್ಬಾಗದಲ್ಲಿಲಕ್ಷ್ಮಿಚಾಮುಂಡೇಶ್ವರಿಮತ್ತುಸರಸ್ವತಿಯಮರ್ತಿಇದ್ದು, ತಳಭಾಗದಲ್ಲಿವಿಜಯದಶಮಿಯದಿನಸಿಂಹಾಸನಕ್ಕೆರಾಜವಂಶಸ್ಥರಿಂದ ಹೋಮ ಹವನನಡೆಸಿ ಸಿಂಹವನ್ನುಜೋಡಿಸುತ್ತಾರೆ.

ಮೈಸೂರುಅರಸರಬೆಡಗಿನರತ್ನಖಚಿತಸ್ವರ್ಣಸಿಂಹಾಸನ

ಸ್ವರ್ಣಕಲಾನಿಪುಣ ಸಿಂಗಣ್ಣಾಚರ್ಯಈಸಿಂಹಾಸನವನ್ನುಚಿನ್ನಾಭರಣಗಳು, ಬೆಲೆಬಾಳುವರತ್ನಗಳುಮತ್ತುಬೆಳ್ಳಿಯಪ್ರತಿಮೆಗಳಿಂದಶೃಂಗರಿಸಿದ್ದಾರೆ. ಕಾಲಕ್ರಮೇಣಇದಕ್ಕೆಚಿನ್ನದಹಾಳೆಗಳು, ನವರತ್ನಗಳುಮತ್ತುಕಲಾತ್ಮಕ ಅಲಂಕಾರಗಳನ್ನುಅಳವಡಿಸಿಭವ್ಯರೂಪನೀಡಲಾಗಿದೆ.

ವಿದ್ಯುತ್ದೀಪಾಲಂಕಾರ:

ನಾಡಹಬ್ಬದಸರಾಮಹೋತ್ಸವದಅಂಗವಾಗಿಚಾಮುಂಡೇಶ್ವರಿ ವಿದ್ಯುತ್ಸರಬರಾಜುನಿಗಮದ (ಅಇಅ) ವತಿಯಿಂದಮೈಸೂರುನಗರದಲ್ಲಿ ಸುಮಾರು 130 ರಿಂದ 136 ಕಿಲೋಮೀಟರ್ಉದ್ದದರಸ್ತೆಗಳಿಗೆ ವೈವಿಧ್ಯಮಯಹಾಗೂ ಆರ್ಷಕವಿದ್ಯುತ್ದೀಪಾಲಂಕಾರಮಾಡಲಾಗುತ್ತದೆ.

ಇಡೀಮೈಸೂರುನಗರವನ್ನುಕಂಗೊಳಿಸುವಂತೆಮಾಡುವ ಈ ದೀಪಾಲಂಕಾರವುನಗರದಸುಮಾರು 118 ಪ್ರಮುಖವೃತ್ತಗಳು ಮತ್ತು ಜಂಕ್ಷನ್ಗಳನ್ನುಒಳಗೊಂಡಿರುತ್ತದೆ. ಇದರೊಂದಿಗೆರ್ನಾಟಕದ ಸಂಸ್ಕೃತಿಮತ್ತು ಸಾಧಕರನ್ನುಬಿಂಬಿಸುವ 75ಕ್ಕೂಹೆಚ್ಚುಕಲಾಕೃತಿಗಳನ್ನುಎಲ್ ಇಡಿದೀಪಗಳ ಮೂಲಕಪ್ರರ್ಶಿಸಲಾಗುತ್ತದೆ. ದೇಶಹಾಗೂವಿದೇಶಗಳಿಂದ ಬರುವಪ್ರವಾಸಿಗರ ವೀಕ್ಷಣೆಗಾಗಿಈಅದ್ಭುತಬೆಳಕಿನಹಬ್ಬವನ್ನುಒಟ್ಟು 21 ದಿನಗಳಕಾಲ ಮುಂದುವರಿಸಲಾಗುತ್ತದೆ.

ಅರಮನೆ ದಸರಾ ಮತ್ತು ನಾಡಹಬ್ಬ ದಸರಾ

1969ರ ನಂತರ ಮೈಸೂರು ರಾಜಮನೆತನದ ಆಡಳಿತ ಅಂತ್ಯಗೊಂಡ ಹಿನ್ನೆಲೆಯಲ್ಲಿ ದಸರಾ ಆಚರಣೆಯಲ್ಲಿ ಮಹತ್ವದ ಬದಲಾವಣೆ ಉಂಟಾಯಿತು. ಪ್ರಸ್ತುತ ಮೈಸೂರಿನಲ್ಲಿ ದಸರಾ ಎರಡು ಪ್ರಮುಖ ರೂಪಗಳಲ್ಲಿ ನಡೆಯುತ್ತದೆ.

ಒಂದೆಡೆ ಅರಮನೆಯೊಳಗೆ ರಾಜಮನೆತನದ ಪರಂಪರೆಯನ್ನು ಮುಂದುವರಿಸಿಕೊಂಡು ಧರ್ಮಿಕ ಮತ್ತು ಸಾಂಪ್ರದಾಯಿಕ ಆಚರಣೆಗಳು ನಡೆಯುತ್ತವೆ. ಖಾಸಗಿ ರ್ಬಾ್ರ್ ಸರಸ್ವತಿ ಪೂಜೆ, ಆಯುಧ ಪೂಜೆ, ವಿಜಯದಶಮಿ, ಶಮೀಪೂಜೆ ಹಾಗೂ ಇತರ ಸಾಂಪ್ರದಾಯಿಕ ವಿಧಿವಿಧಾನಗಳು ಇದರ ಭಾಗವಾಗಿವೆ.



ಮತ್ತೊಂದೆಡೆ ರ್ನಾಟಕ ರ್ಕಾರವು ಸರ್ವಜನಿಕರಿಗಾಗಿ ನಾಡಹಬ್ಬ ದಸರಾವನ್ನು ಆಯೋಜಿಸುತ್ತದೆ. ಜಂಬೂ ಸವಾರಿ, ಸಾಂಸ್ಕೃತಿಕ ಕರ್ಯಕ್ರಮಗಳು ಮತ್ತು ವಿವಿಧ ಸರ್ವಜನಿಕ ಕರ್ಯಕ್ರಮಗಳು ಇದರ ಪ್ರಮುಖ ಆರ್ಷಣೆಗಳಾಗಿವೆ.

ಹೀಗಾಗಿ ಇಂದಿನ ಮೈಸೂರು ದಸರಾ ರಾಜಮನೆತನದ ಪರಂಪರೆ ಮತ್ತು ಆಧುನಿಕ ಸರ್ವಜನಿಕ ಉತ್ಸವದ ಸಮನ್ವಯವಾಗಿ ರೂಪುಗೊಂಡಿದೆ.

ಚಾಮುಂಡೇಶ್ವರಿ ಉತ್ಸವ ಮತ್ತು ಜಂಬೂ ಸವಾರಿ

ಮೈಸೂರು ದಸರಾ ಮತ್ತು ಆನೆಗಳ ನಡುವಿನ ಸಂಬಂಧವು ಬಹಳ ಹಳೆಯದು. ಒಡೆಯರ ಕಾಲದ ರಾಜವೈಭವದ ಮೆರವಣಿಗೆಗಳಿಂದ ಆರಂಭವಾದ ಈ ಪರಂಪರೆ, ಇಂದು ರ್ಕಾರದ ನೇತೃತ್ವದಲ್ಲಿ ನಡೆಯುವ ಜಂಬೂ ಸವಾರಿಯ ರೂಪದಲ್ಲಿ ಮುಂದುವರಿದಿದೆ.

ಜಂಬೂಸವಾರಿಆರಂಭಕ್ಕೆಮುನ್ನಶುಭಕುಂಭಲಗ್ನದಲ್ಲಿ ಅರಮನೆಯ ಬಲರಾಮದ್ವಾರದಲ್ಲಿ ನಂದಿಧ್ವಜಕ್ಕೆಮೊದಲು ಪ'ೂಜ'ೆಸ'ಲ್ಲಿಸ'ಲಾಗ'ುತ'್ತದ'ೆ. ಚಿನ್ನದಅಂಬಾರಿಯಲ್ಲಿವಿರಾಜಮಾನಳಾಗಿ ಆಸೀನಳಾಗಿರುವ ತಾಯಿಚಾಮುಂಡೇಶ್ವರಿ ದೇವಿ ಮರ್ತಿಗೆ ಪುಷ್ಪರ್ಚನೆಸಲ್ಲಿಸಲಾಗುತ್ತದೆ. ಆಬಳಿಕ24 ಕುಶಾಲತೋಪುಗಳ ಗೌರವವನ್ನು ಸರ್ಪಣೆಮಾಡಲಾಗುತ್ತದೆ. ಅಲ್ಲಿಂದಅರಮನೆಆವರಣದಲ್ಲಿವಿಜಯುದ'ಶಮಿಯಅತ್ಯಾರ್ಷಕಮೆರವಣಿಗೆಗೆಚಾಲನೆ ದೊರೆಯುತ್ತದೆ. ಜಂಬೂ ಸವಾರಿಯು ಅರಮನೆ ಆವರಣದಿಂದ ಬನ್ನಿಮಂಟ ಪದವರೆಗೆನಡೆಯುತ್ತದೆ. ಚಿನ್ನದಅಂಬಾರಿಯಲ್ಲಿ ವಿರಾಜಮಾನಳಾದ ದೇವಿ ಚಾಮುಂಡೇಶ್ವರಿಯನ್ನುಹೊತ್ತು 14 ಅಲಂಕೃತಗಜಗಳೊಂದಿಗೆ, ಜನಸಾಗರದೊಡನೆಧೀರ- ಗಂಭೀರ ನಡಿಗೆಯಲ್ಲಿ ಮೆರವಣಿಗೆಯಲ್ಲಿ ಸಾಗುವಗಜರಾಜನಠೀವಿಗೆಸರಿಸಾಟಿಯಿಲ್ಲ. ಭಾರತದಬೇರೆಲ್ಲೂ ದಸರಾಸಮಯದಲ್ಲಿ ಇಷ್ಟೊಂದು ಸಂಖ್ಯೆಯಲ್ಲಿ ಆನೆಗಳುಪಾಲ್ಗೊಳ್ಳುವುದಿಲ್ಲ.

ಅಲಂಕಾರಕ್ಕೆಸಜ್ಜಾಗಿರುವ 80 ಕೆ.ಜಿಚಿನ್ನದ 750 ಕೆ.ಜಿತೂಕದಅಂಬಾರಿ



ಅಂಬಾರಿಹೊತ್ತಬಲರಾಮನಜತೆಗೆಪೊಲೀಸ್ಬ್ಯಾಂಡ್ಆರಕ್ಷತಾಳವಾದ್ಯ ಕಳೆಗಟ್ಟುತ್ತದೆ. ಅಲ್ಲದೆ, ಕಂಸಾಳೆಕುಣಿತ, ಕಲಾತಂಡಗಳನೃತ್ಯಪ್ರರ್ಶನಗಳಜತೆಗೆರಾಜ್ಯದ ವಿವಿಧ ಜಿಲ್ಲೆಗಳ ಸಂಸ್ಕೃತಿ ಸಾರುವ ಸ್ತಬ್ಧಚಿತ್ರಗಳುಎಲ್ಲರ ಗಮನಸೆಳೆಯುತ್ತದೆ. ಇದರವೀಕ್ಷಣೆಗೆಲಕ್ಷಾಂತರ ಸಂಖ್ಯೆಯಲ್ಲಿ ಜನರುಸೇರುತ್ತಾರೆ.

ಜಂಬೂಸವಾರಿಯಲ್ಲಿಅಲಂಕೃತಆನೆಗಳು

ದಸರೆಯ ವಿಶೇಷ ಕರ್ಯಕ್ರಮಗಳು:ಯುವಸಂಭ್ರಮ, ಯುವದಸರಾ: ದಸರಾಗೆಯುವಜನರನ್ನು ಸೆಳೆಯಲುಯುವಸಂಭ್ರಮಮತ್ತುಯುವ ದಸರಾ ಸಾಂಸ್ಕೃತಿಕಕರ್ಯ ಕ್ರಮಗಳನ್ನುಮಹಾರಾಜಮೈದಾನದಲ್ಲಿನಡೆಸಲಾಗುತ್ತದೆ. ಮೈಸೂರುವಿಶ್ವವಿದ್ಯಾಲಯದಲ್ಲಿರುವ ಬಯಲು ರಂಗಮಂದಿರದಲ್ಲಿ ಯುವ ಸಂಭ್ರಮಸಮಾರಂಭನಡೆಯುತ್ತದೆ. ಇದರಲ್ಲಿ ಸ್ಥಳೀಯಕಲಾವಿದರಿಗೆ ಆದ್ಯತೆ ನೀಡಲಾಗುತ್ತದೆ. ಜನಪದಸೇರಿದಂತೆವಿವಿಧಪ್ರಾಕಾರಗಳನೃತ್ಯ ಕಲಾವಿದರ ಪ್ರರ್ಶನಗಮನಸೆಳೆಯುತ್ತದೆ. ವಿವಿಧಜಿಲ್ಲೆಗಳಶಾಲಾ- ಕಾಲೇಜುವಿದ್ಯರ್ಥಿಗಳು ಈಸಾಂಸ್ಕೃತಿಕಕರ್ಯಕ್ರಮಗಳನ್ನುನಡೆಸಿಕೊಡುತ್ತಾರೆ. ಇನ್ನುಯುವದಸರಾದಲ್ಲಿ ಸಿನಿಮಾತಾರೆಯರುಹಾಗೂಖ್ಯಾತಗಾಯಕರಸಮಾಗಮವಾಗುತ್ತದೆ. ತಮ್ಮನೆಚ್ಚಿನನಟ-ನಟಿಯರು, ಗಾಯಕರನ್ನುನೋಡಲು ಅಪಾರ ಸಂಖ್ಯೆಯಲ್ಲಿಯುವದಸರಾದಲ್ಲಿಜನಸೇರುತ್ತಾರೆ.

ಕಂಬಳ: ಮೈಸೂರು ದಸರಾದಲ್ಲಿ ಇದೇ ಮೊದಲಬಾರಿಗೆಕರಾವಳಿಯ ಕೃಷಿ, ಸಂಸ್ಕೃತಿಹಾ ಗೂಜನಪದದಪ್ರತೀಕವಾದ ಕಂಬಳ ಆಯೋಜನೆ ಮಾಡಲಾಗುತ್ತಿದೆ. ದಷ್ಟಪುಷ್ಟವಾಗಿಬೆಳೆಸಿದಕೋಣಗಳನ್ನುಹಸನಾಗಿ ಹದಮಾಡಿದಮಣ್ಣಿನಗದ್ದೆಯಲ್ಲಿಓಡಿಸುವಸ್ಪರ್ಧೆಯೇಕಂಬಳ. ಈಕ್ರೀಡೆ ದಕ್ಷಿಣಕನ್ನಡಮತ್ತುಉಡುಪಿಜಿಲ್ಲೆಯಜನಪದದೊಂದಿಗೆಹಾಸುಹೊಕ್ಕಾಗಿದೆ.

ಮೇಳಗಳು:

ಕೃಷಿ, ಆಹಾರಮೇಳಗಳನ್ನುದಸರಾದಲ್ಲಿನಡೆಸಲಾಗುತ್ತದೆ. ರಾಜ್ಯದ ನಾನಾಭಾಗಗಳಸ್ಥಳೀಯಹಾಗೂವಿಶೇಷತಿನಿಸುಗಳುಮಳಿಗೆಗಳಲ್ಲಿಸಿಗುತ್ತವೆ. ಆಹಾರಪ್ರಿಯರಿಗೆಈಮೇಳಖುಷಿಕೊಡುತ್ತದೆ. ಇಲ್ಲಿಸ್ಪರ್ಧೆಗಳನ್ನು ಸಹಆಯೋಜನೆಮಾಡಲಾಗುತ್ತದೆ. ವಿಜೇತರಿಗೆ ವಿಶೇಷ ಬಹುಮಾನಗಳುಸಹಇರುತ್ತವೆ. ಕೃಷಿಮೇಳವುರೈತರಿಗೆಸಹಕಾರಿಯಾಗಿದೆ. ನಾನಾತಳಿಯಬೆಳೆಗಳುಮತ್ತುಹಣ್ಣುಗಳಪ್ರರ್ಶನ, ಮಾರಾಟಕ್ಕೆ ಅವಕಾಶ ಇರುತ್ತದೆ. ರೈತರಿಗೆಕೃಷಿಸಂಬಂಧಿತಸಲಹೆಗಳಿಗಾಗಿ ವಿಚಾರಣಾಸಂಕಿರಣಗಳನ್ನು ಸಹಆಯೋಜನೆಮಾಡಲಾಗುತ್ತದೆ.

ಫಲಪುಷ್ಪ, ವಸ್ತುಪ್ರರ್ಶನ:

ದಸರಾದಲ್ಲಿಫಲಪುಷ್ಪಮತ್ತುವಸ್ತುಪ್ರರ್ಶನಗಳುಪ್ರಮುಖಆರ್ಷಣೆಯಾಗಿದೆ. ವಿವಿಧಬಗೆಯಪುಷ್ಪಗಳಿಂದನಾನಾಮಾದರಿಗಳನ್ನುರಚಿಸಿಪ್ರರ್ಶಿಸಲಾಗುತ್ತದೆ. ಆರ್ಷಕಪುಷ್ಪಮಾದರಿಗಳುಜನರನ್ನುಸೆಳೆಯುವಂತಿರುತ್ತವೆ. ಅನೇಕರಿಗೆಇದುಸೆಲ್ಫಿಸ್ಪಾಟ್ಆಗುತ್ತದೆ. ರ್ಕಾರಗಳಪ್ರಮುಖಯೋಜನೆಗಳನ್ನು, ಕರ್ಯಸಾಧನೆಗಳನ್ನುವಸ್ತುಪ್ರರ್ಶನದಮೂಲಕತಿಳಿಸಲಾಗುತ್ತದೆ. ನಾಡು-ದೇಶದಇತಿಹಾಸ, ಪ್ರವಾಸಿತಾಣಗಳಬಗ್ಗೆಅರಿವು ಮೂಡಿಸುವ ಮಾದರಿಗಳು ಇರುತ್ತವೆ.

ಗೊಂಬೆಪ್ರರ್ಶನ

ಸ್ಥಳೀಯವಾಗಿ ಗೊಂಬೆ ಹಬ್ಬ ಅಥವಾ ಇದರಲ್ಲಿ ನವರಾತ್ರಿ ಹಬ್ಬದಸಂರ್ಭದಲ್ಲಿಮನೆಗಳುಮತ್ತುಸರ್ವಜನಿಕಸ್ಥಳಗಳಲ್ಲಿಸುಂದರವಾಗಿ ಹಾಗೂವ್ಯವಸ್ಥಿತವಾಗಿಜೋಡಿಸಲಾದಗೊಂಬೆಗಳುಮತ್ತುಮರ್ತಿಗಳನ್ನುಪ್ರರ್ಶಿಸಲಾಗುತ್ತದೆ. ಈಪ್ರರ್ಶನವುರಾಮಾಯಣದಂತಹಪೌರಾಣಿಕಮಹಾಕಾವ್ಯಗಳು, ದಸರಾಮೆರವಣಿಗೆಯದೃಶ್ಯಗಳು (ಜಂಬೂಸವಾರಿ), ನವದರ್ಗೆಯರುಮತ್ತುಅಷ್ಟಲಕ್ಷ್ಮಿಯರಜೊತೆಗೆಸಮಕಾಲೀನಅಥವಾಸಾಮಾಜಿಕ, ಸಾಂಸ್ಕೃತಿಕವಿಷಯಗಳನ್ನುಹೆಚ್ಚಾಗಿಬಿಂಬಿಸುತ್ತವೆ.

ಮಕ್ಕಳ ದಸರಾ

ದಸರಾದಲ್ಲಿ ವಿಶೇಷ ಆರ್ಷಣೆ ಮಕ್ಕಳ ದಸರಾ ಆಗಿದೆ. ಮಕ್ಕಳ ದಸರಾದಲ್ಲಿ ವಿಶೇಷವಾಗಿ ವಿವಿಧ ಮಕ್ಕಳ ಸಾಂಸ್ಕೃತಿಕ ಕರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ವಿಶೇಷ ಸಾಧನೆ ತೋರಿದ ಮಕ್ಕಳಿಂದ ಮಕ್ಕಳ ದಸರಾವನ್ನು ಉದ್ಘಾಟಿಸಲಾಗುತ್ತದೆ.

ಗೋಷ್ಠಿಗಳು:

ಖ್ಯಾತವಿದ್ವಾಂಸರು, ಸಾಹಿತಿಗಳು, ಕವಿಗಳನೆಲೆವೀಡುಮೈಸೂರು. ಸಂಗೀತ-ಸಾಹಿತ್ಯಕ್ಷೇತ್ರಗಳಿಗೆಮೈಸೂರುತನ್ನದೇಆದಕೊಡುಗೆನೀಡಿದೆ. ಆದ್ದರಿಂದದಸರಾದಲ್ಲಿಕವಿಗೋಷ್ಠಿ, ವಿಚಾರಸಂಕಿರಣಗಳು, ಸಂಗೀತ ಕಚೇರಿಗಳನ್ನುಆಯೋಜಿಸಲಾಗುತ್ತದೆ. ದಸರಾಮತ್ತು ಯುವ ಕವಿಗೋಷ್ಠಿಮೂಲಕಸಾಹಿತ್ಯಾಸಕ್ತರನ್ನುಸೆಳೆಯಲಾಗುತ್ತದೆ. ಓದುಗಪ್ರಿಯರಿಗಾಗಿ ಪುಸ್ತಕಮೇಳಕೂಡನಡೆಸಲಾಗುತ್ತದೆ. ಸಂಗೀತಪ್ರಿಯರಿಗಾಗಿ ಅರಮನೆಯಲ್ಲಿಸಂಗೀತಕರ್ಯಕ್ರಮಗಳುಜರುಗುತ್ತವೆ. ಖ್ಯಾತವಿದ್ವಾಂಸರು, ಕಲಾವಿದರುಸಂಗೀತಕರ್ಯಕ್ರಮಗಳನ್ನುನಡೆಸಿಕೊಡುತ್ತಾರೆ. ಕಲಾಸಕ್ತರಿಗಾಗಿ ಚಲಚಿತ್ರೋತ್ಸವ, ನಾಟಕಪ್ರರ್ಶನಗಳುಸಹನಡೆಯುತ್ತವೆ.

ಪಂಜಿನಕವಾಯತು

ವಿಜಯದಶಮಿಯಂದು ಜಂಬೂಸವಾರಿ ಮೆರವಣಿಗೆ ಬಳಿಕಸಂಜೆಮೈಸೂರಿನಬನ್ನಿಮಂಟ ಪಮೈದಾನದಲ್ಲಿ ನಡೆಯುವ ಅತ್ಯಂತ ಆರ್ಷಕ ಮತ್ತು ರೋಮಾಂಚಕ ಅಂತಿಮಕರ್ಯಕ್ರಮಪಂಜಿನಕವಾಯತು. ಇದುಪೊಲೀಸ್ಪಡೆಗಳಕವಾಯತು, ಸಾಹಸಪ್ರರ್ಶನಹಾಗೂಬಣ್ಣಬಣ್ಣದ ಪಟಪಟಿಸುವಪಂಜುಗಳಬೆಳಕಿನಸಂಭ್ರಮದೊಂದಿಗೆಕಣ್ಮನಸೆಳೆಯುತ್ತದೆ. ಅತ್ಯಾರ್ಷಕಅಶ್ವಾರೋಹಿದಳದಸಾಹಸಗಳು, ಮೈಜುಮ್ಮೆನಿಸುವ ಮೋಟರ್ಸೈಕಲ್ಸಾಹಸಪ್ರರ್ಶನಗಳು (ಡರ್‌ಡೆವಿಲ್ಸ್ಟಂಟ್ಸ್), ಪೊಲೀಸ್ಬ್ಯಾಂಡ್ವಾದನಮತ್ತುಪಂಜುಗಳೊಂದಿಗೆಸಾಮೂಹಿಕಕವಾಯತುನಡೆಯುತ್ತದೆ. ರಾತ್ರಿಯವೇಳೆಆಕಾಶದಲ್ಲಿಮೂಡುವವರ್ಣರಂಜಿತಸುಂದರಸಿಡಿಮದ್ದುಪ್ರರ್ಶನಹಾಗೂಲೇಸ/ರ್ಡ್ರೋನ್ಶೋಕೂಡಗಮನಸೆಳೆಯುತ್ತದೆ. ದಸರಾಗೆ ಅಂತಿಮ ಸ್ಪರ್ಶ ನೀಡುವ ಕರ್ಯಕ್ರಮ ಇದಾಗಿದೆ. ರಾಜರ ಕಾಲದಿಂದಲೂ ನಡೆದುಕೊಂಡು ಬಂದಿರುವ ಈ ಪರಂಪರೆಯು ದಸರಾ ಉತ್ಸವದ ಸಮಾಪ್ತಿಯನ್ನು ಸಾರುತ್ತದೆ.

ಅರಮನೆಯೊಳಗಿನ ಸಾಂಪ್ರದಾಯಿಕ ಆಚರಣೆಗಳು ಮೈಸೂರು ಒಡೆಯರ ಇತಿಹಾಸವನ್ನು ನೆನಪಿಸಿದರೆ, ಸರ್ವಜನಿಕ ದಸರಾ ಕರ್ಯಕ್ರಮಗಳು ಆ ಪರಂಪರೆಯನ್ನು ಜನಸಾಮಾನ್ಯರೊಂದಿಗೆ ಸಂರ್ಕಿಸುತ್ತವೆ.

ಮೈಸೂರು ದಸರಾ ಕೇವಲ ಧರ್ಮಿಕ ಉತ್ಸವವಲ್ಲ. ಇದು ರ್ನಾಟಕದ ಸಾಂಸ್ಕೃತಿಕ ಪರಂಪರೆ, ಕಲೆ, ಸಂಗೀತ, ನೃತ್ಯ, ಜನಪದ ಸಂಪ್ರದಾಯಗಳು ಮತ್ತು ಐತಿಹಾಸಿಕ ನೆನಪುಗಳನ್ನು ಒಂದೆಡೆ ಸೇರಿಸುವ ಉತ್ಸವವಾಗಿದೆ.

ಸಮಾರೋಪ

ಮೈಸೂರು ದಸರಾ ಹಲವು ಶತಮಾನಗಳ ಇತಿಹಾಸ, ಧರ್ಮಿಕ ನಂಬಿಕೆ, ರಾಜಪರಂಪರೆ, ಕಲೆ, ಸಂಸ್ಕೃತಿ ಮತ್ತು ಜನಪಾಲ್ಗೊಳ್ಳುವಿಕೆಯ ಅಪರ್ವ ಸಂಗಮವಾಗಿದೆ. ವಿಜಯನಗರದ ಪರಂಪರೆಯಿಂದ ಮೈಸೂರು ಒಡೆಯರ ರಾಜವೈಭವದವರೆಗೆ ಮತ್ತು ಅಲ್ಲಿಂದ ಇಂದಿನ ನಾಡಹಬ್ಬದ ರೂಪದವರೆಗೆ ದಸರಾ ಹಲವು ಹಂತಗಳನ್ನು ದಾಟಿ ಬೆಳೆದಿದೆ.

ಬನ್ನಿ, ಈ ರ್ಷದ ನಾಡಹಬ್ಬ ದಸರಾದಲ್ಲಿ ಎಲ್ಲರೂ ಪಾಲ್ಗೊಂಡು, ವೈವಿಧ್ಯಮ ಆಚರಣೆಗಳನ್ನು ಕಣ್ತುಂಬಿಕೊಳ್ಳೋಣ!

ಡಾ. ಶಾಲಿನಿ ರಜನೀಶ್
ಸರಕಾರ ಮುಖ್ಯ ಕಾರ್ಯದರ್ಶಿ







Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR